# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 137 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–12–2023 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 137 | Title- Code: KARKAN 28269 | Chitradurga | Date: 12-12-2023 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ನಿಜಲಿಂಗಪ್ಪ ಬದುಕಿನ ಪಯಣ ವಿವಿ ಪಠ್ಯವಾಗಬೇಕು: ನವೀನ್ 2
ತರಕಾರಿ ಮಾರುವ ಮೂಲಕ ಅತಿಥಿ ಉಪನ್ಯಾಸಕರ ವಿನೂತನ ಪ್ರತಿಭಟನೆ 3
2024ರ ಲೋಕಸಭಾ ಚುನಾವಣೆಗೆ ಸಿದ್ಧತೆ ಆರಂಭ, ಮತಗಟ್ಟೆಗಳ ಸಮೀಕ್ಷೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಹಿಳಾ ಪೊಲೀಸ್ ಠಾಣೆ ಸ್ಥಳಾಂತರ

» **ಚಿತ್ರದುರ್ಗ**

ಮಹಿಳಾ ಪೊಲೀಸ್ ಠಾಣೆಯನ್ನು ಈಗ ಹಾಲಿ ಇರುವ ಬಾಡಿಗೆ ಕಟ್ಟಡದಿಂದ ಚಿತ್ರದುರ್ಗ ನಗರದ ಬ್ಯಾಂಕ್ ಕಾಲೋನಿಯ ಹತ್ತಿರದ ಅಲೆಗ್ಸಾಂಡರ್ ಲೇಔಟ್‌ನಲ್ಲಿರುವ ಬಡಾವಣೆ ಪೊಲೀಸ್ ಠಾಣೆಯ ಮೊದಲನೇ ಮಹಡಿಗೆ ಸ್ಥಳಾಂತರಗೊಳಿಸಿ ಕಾರ್ಯನಿರ್ವಹಿಸುತ್ತಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8277985128 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೈತರು ಮೇವು ಸಂಗ್ರಹಿಸಿ ಗೋಶಾಲೆಗೆ ನೀಡಿ

» **ದಾವಣಗೆರೆ**

ರಾಜ್ಯದಲ್ಲಿ ಮಳೆಯ ಅಭಾವದಿಂದ ಬರ ಪರಿಸ್ಥಿತಿ ತಲೆದೋರಿದ್ದು, ದಾವಣಗೆರೆ ಜಿಲ್ಲೆಯ ಹೊಸಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಗೋಶಾಲೆಗೆ ಹೆಚ್ಚುವರಿ ಮೇವನ್ನು ಸಂಗ್ರಹಿಸಬೇಕಾಗಿರುತ್ತದೆ. ಜಿಲ್ಲೆಯಲ್ಲಿ ಅಧಿಕ ಮೇವಿನ ದಾಸ್ತಾನಿರುವ ರೈತರು, ಮೇವು ಪೂರೈಕೆದಾರರು ಮೇವನ್ನು ಗೋಶಾಲೆಗೆ ನೀಡಲು ಅವಕಾಶವಿದ್ದು, ಬೇಲು ಮಾಡಿದ ಸ್ಥಿತಿಯಲ್ಲಿ ಒಣಗಿದ ಭತ್ತದ ಹುಲ್ಲು, ಒಣಗಿದ ಮೆಕ್ಕೆಜೋಳದ ಸಪ್ಪೆ, ಬಿಳಿಜೋಳದ ಸಪ್ಪೆ ಮತ್ತು ಒಣಗಿದ ರಾಗಿ ಹುಲ್ಲಿಗೆ ಪ್ರತಿ ಮೆಟ್ರಿಕ್ ಟನ್ ಮೇವಿನ ದರವನ್ನು ನಮೂದಿಸಿ, ಡಿ.26 ರೊಳಗೆ ಉಪನಿರ್ದೇಶಕರು (ಆಡಳಿತ) ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ದಾವಣಗೆರೆ ಕಚೇರಿಗೆ ಸಲ್ಲಿಸಿದಲ್ಲಿ ಉಪನಿರ್ದೇಶಕರು (ಆಡಳಿತ)ರವರು ನಿಮ್ಮ ಮೇವಿನ ಗುಣಮಟ್ಟವನ್ನು ಪರಿಶೀಲಿಸಿ ಗೋಶಾಲೆಗೆ ಅವಶ್ಯವಿರುವಷ್ಟು ಮೇವನ್ನು ನಿಯಮಾನುಸಾರ ಖರೀದಿಸಲಾಗುವುದು. ಹೊಸಳ್ಳಿ ಗ್ರಾಮದ ಗೋಶಾಲೆಗೆ ಹತ್ತಿರವಿರುವ ರೈತರು ಮತ್ತು ಮೇವು ಪೂರೈಕೆದಾರರಿಗೆ ಆದ್ಯತೆ ನೀಡಲಾಗುವುದು ಎಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಚಂದ್ರಶೇಖರ್ ಸುಂಕದ್ ತಿಳಿಸಿದ್ದಾರೆ.

### ಗ್ರಾಮ ಪಂಚಾಯಿತಿಗೆ ಭೇಟಿ: ಸಾರ್ವಜನಿಕ ದೂರು ಮನವಿ

» **ದಾವಣಗೆರೆ**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು ಪ್ರತಿ ತಿಂಗಳ ಎರಡನೇ ಬುಧವಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಶಾಸನಬದ್ಧ ಯೋಜನೆ, ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ದೂರು ಮನವಿಗಳನ್ನು ಸ್ವೀಕರಿಸಿ ಸಮಸ್ಯೆಗಳನ್ನು ಇತ್ಯರ್ಥಪಡಿಸಲು ನಿರ್ದೇಶಿಸಿರುತ್ತಾರೆ. ಡಿ.13 ರಂದು ಹರಿಹರ ತಾಲ್ಲೂಕಿನ ಕಡರನಾಯಕನಹಳ್ಳಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಸಾರ್ವಜನಿಕರ ದೂರು–ಮನವಿಗಳನ್ನು ಸ್ವೀಕರಿಸಿ ಸಾಧ್ಯವಾದಷ್ಟು ಸ್ಥಳದಲ್ಲೇ ಇತ್ಯರ್ಥಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಗ್ರಾಮ ಪಂಚಾಯಿತಿಯ ಮತ್ತು ಅಕ್ಕಪಕ್ಕದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳುಬೇಕೆಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಡಿ.12 ರಂದು ಅಖಿಲ ಭಾರತ ಗೃಹರಕ್ಷಕದಳ ದಿನಾಚರಣೆ

» **ದಾವಣಗೆರೆ**

ಜಿಲ್ಲಾಡಳಿತ ಹಾಗೂ ಜಿಲ್ಲಾ ಗೃಹರಕ್ಷಕದಳ ವತಿಯಿಂದ ಡಿ.12 ರಂದು ಮಧ್ಯಾಹ್ನ 12 ಗಂಟೆಗೆ ನಗರದ ದೇವರಾಜ ಅರಸ್ ಬಡಾವಣೆಯ ಬಿ. ಬ್ಲಾಕ್‌ನಲ್ಲಿರುವ ಶಿವ ಪಾರ್ವತಿ ಕಲ್ಯಾಣ ಮಂಟಪದಲ್ಲಿ ಅಖಿಲ ಭಾರತ ಗೃಹರಕ್ಷಕದಳ ದಿನಾಚರಣೆಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿದೆ. ಗೃಹರಕ್ಷಕ ದಳದ ಜಿಲ್ಲಾ ಕಮಾಂಡೆಂಟ್ ಡಾ. ಸುಜಿತ್ ಕುಮಾರ್ ಎಸ್.ಹೆಚ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಪಾಲ್ಗೊಳ್ಳುವರು.

## ಜಮ್ಮು–ಕಾಶ್ಮೀರದ 370ನೇ ವಿಧಿ ರದ್ದು

# ಕೇಂದ್ರದ ನಿರ್ಧಾರ ಎತ್ತಿಹಿಡಿದ ಸುಪ್ರೀಂ

» **ನವದೆಹಲಿ**

ಜಮ್ಮು ಮತ್ತು ಕಾಶ್ಮೀರಕ್ಕೆ ಸಂವಿಧಾನದ 370 ನೇ ವಿಧಿಯಡಿ ನೀಡಲಾಗಿದ್ದ ವಿಶೇಷ ಸ್ಥಾನಮಾನ ರದ್ದುಪಡಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸರ್ವೋಚ್ಚ ನ್ಯಾಯಾಲಯ ಎತ್ತಿ ಹಿಡಿಯುವ ಮೂಲಕ ಐತಿಹಾಸಿಕ ತೀರ್ಪು ಪ್ರಕಟಿಸಿದೆ. 370ನೇ ವಿಧಿಯನ್ನು ರದ್ದುಪಡಿಸಲು ರಾಷ್ಟ್ರಪತಿಯವರು ಸಾಂವಿಧಾನಿಕ ಆದೇಶ ಹೊರಡಿಸುವ ಅಧಿಕಾರ ಹೊಂದಿದ್ದಾರೆ ಎಂದು ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ವೈ ಚಂದ್ರಚೂಡ್ ನೇತೃತ್ವದ ಪೀಠ ಸ್ಪಷ್ಟಪಡಿಸಿದೆ.

ಜಮ್ಮು ಕಾಶ್ಮೀರ ಭಾರತದ ಅವಿಭಾಜ್ಯ ಅಂಗ.ವಿಶೇಷ ಸ್ಥಾನಮಾನ ಎನ್ನುವುದು ತಾತ್ಕಾಲಿಕ, ಕೇಂದ್ರ ಸರ್ಕಾರ ತೆಗೆದುಕೊಂಡ ನಿರ್ಧಾರವನ್ನು ಪ್ರಶ್ನಿಸಲು ಸಾಧ್ಯವಿಲ್ಲ. ಜಮ್ಮು ಕಾಶ್ಮೀರಕ್ಕೆ 2024ರ ಸೆಪ್ಟಂಬರ್ ಒಳಗೆ ಚುನಾವಣೆ ನಡೆಸಿ ಜೊತೆಗೆ ಸಾಧ್ಯವಾದಷ್ಟು ಬೇಗ ರಾಜ್ಯದ ಸ್ಥಾನ ಮಾನ ನೀಡಲು ನಿರ್ಧಾರ ಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಸೂಚನೆ ನೀಡಿದೆ.ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ನ್ಯಾಯಮೂರ್ತಿಗಳಾದ ಸಂಜಯ್ ಕಿಶನ್ ಕೌಲ್, ಸಂಜೀವ್ ಖನ್ನಾ, ಬಿಆರ್ ಗವಾಯಿ ಮತ್ತು ಸೂರ್ಯಕಾಂತ್ ಐವರು ನ್ಯಾಯಮೂರ್ತಿಗಳ ಸಂವಿಧಾನ ಪೀಠ,ಕಲಂ 370 ವಿಧಿ ರದ್ದು ಮಾಡಿರುವ ಕೇಂದ್ರ ಸರ್ಕಾರದ ಕ್ರಮ ಸಂವಿಧಾನದ ಅಡಿ ಸರಿಯಾಗಿಯೇ ಇದೆ ಎಂದು ಸಮರ್ಥಿಸಿಕೊಂಡು ಮಹತ್ವದ ತೀರ್ಪು ನೀಡಿದೆ.ರಾಷ್ಟ್ರಪತಿಗಳು ಕೈಗೊಂಡ ನಿರ್ಧಾರದ ಮೇಲೆ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಸಾಧ್ಯವಿಲ್ಲ ಎಂದು ಹೇಳುವ ಮೂಲಕ ಜಮ್ಮು ಮತ್ತು ಕಾಶ್ಮೀರದಲ್ಲಿ 370 ನೇ ವಿಧಿಯ ರದ್ದು ಮಾಡುವ ಸಿಂಧುತ್ವವನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ.




**ಬೇಗ ನಿರ್ಧಾರ ಕೈಗೊಳ್ಳಿ**

"2024ರ ಸೆಪ್ಟಂಬರ್ ಅಂತ್ಯದೊಳಗೆ ಜಮ್ಮು ಕಾಶ್ಮೀರಕ್ಕೆ ವಿಧಾನಸಭೆ ಚುನಾವಣೆ ನಡೆಸುವ ಮೂಲಕ ರಾಜ್ಯದ ಸ್ಥಾನ ಮಾನ ಪುನಃ ನೀಡಿ, ಈ ಬಗ್ಗೆ ಶೀಘ್ರ ನಿರ್ಧಾರ ಕೈಗೊಳ್ಳಿ. ಭಾರತದ ಒಕ್ಕೂಟ ವ್ಯವಸ್ಥೆಯಲ್ಲಿ ಜಮ್ಮು ಕಾಶ್ಮೀರ ಅವಿಭಾಜ್ಯ ಅಂಗ. ಹೀಗಾಗಿ ಪ್ರತ್ಯೇಕ ಸಂವಿಧಾನ, ವಿಶೇಷ ಸೌಲಭ್ಯ ಅನ್ವಯವಾಗದು?".

» **ಮುಖ್ಯನ್ಯಾಯಮೂರ್ತಿ, ಡಿ.ವೈ ಚಂದ್ರಚೂಡ್**

ಸಂವಿಧಾನದ ಕಲಂ 370 ಅಡಿಯಲ್ಲಿ ಸಾಂವಿಧಾನಿಕ ಏಕೀಕರಣದ ಕ್ರಮೇಣ ಪ್ರಕ್ರಿಯೆ ನಡೆಯುತ್ತಿಲ್ಲ ಎಂದು ಇತಿಹಾಸ ತೋರಿಸುತ್ತದೆ. 70 ವರ್ಷಗಳ ನಂತರ ಭಾರತದ ಸಂವಿಧಾನ ಒಂದೇ ಬಾರಿಗೆ ಅನ್ವಯಿಸಿದಂತೆ ಅಲ್ಲ. ಇದು ಏಕೀಕರಣ ಪ್ರಕ್ರಿಯೆಯ ಪರಾಕಾಷ್ಠೆಯಾಗಿತ್ತು ಎಂದು ನ್ಯಾಯಪೀಠಹೇಳಿದೆ.ಜಮ್ಮುಮತ್ತುಕಾಶ್ಮೀರ ರಾಜ್ಯ ಇತರ ರಾಜ್ಯಗಳಿಗಿಂತ ಭಿನ್ನವಾದ ಆಂತರಿಕ ಸಾರ್ವಭೌಮತ್ವ ಹೊಂದಿಲ್ಲ. ಜಮ್ಮು ಮತ್ತು ಕಾಶ್ಮೀರ ಭಾರತದ ಒಕ್ಕೂಟಕ್ಕೆ ಸೇರಿದಾಗ ಸಾರ್ವಭೌಮತ್ವ ಅಥವಾ ಆಂತರಿಕ ಸಾರ್ವಭೌಮತ್ವದ ಅಂಶ ಉಳಿದುಕೊಂಡಿಲ್ಲ ಎಂದು ತನ್ನ ತೀರ್ಪಿನಲ್ಲಿ ಹೇಳಿದೆ ಜಮ್ಮು ಮತ್ತು ಕಾಶ್ಮೀರ ರಾಜ್ಯ ಭಾರತದ ಅವಿಭಾಜ್ಯ ಅಂಗ ಎಂಬುದು ಭಾರತದ ಸಂವಿಧಾನದ 1 ಮತ್ತು 370 ನೇ ವಿಧಿಗಳಿಂದ ಸ್ಪಷ್ಟವಾಗಿದೆ. 2018ರ ಡಿಸೆಂಬರ್ ರಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ವಿಧಿಸಲಾದ ರಾಷ್ಟ್ರಪತಿ ಆಳ್ವಿಕೆಯ ಸಿಂಧುತ್ವವನ್ನು ಅರ್ಜಿದಾರರು ನಿರ್ದಿಷ್ಟವಾಗಿ ಪ್ರಶ್ನಿಸದ ಕಾರಣ ತೀರ್ಪು ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಕಲಂ 356 ರ ಅಡಿಯಲ್ಲಿ ಘೋಷಣೆ ಜಾರಿಗೆ ಬಂದಾಗ, ಕೇಂದ್ರ ಸರ್ಕಾರ ಲೆಕ್ಕವಿಲ್ಲದಷ್ಟು ನಿರ್ಧಾರಗಳನ್ನು ತೆಗೆದುಕೊಳ್ಳುತ್ತದೆ. ಪ್ರತಿಯೊಂದು ಕ್ರಿಯೆಯನ್ನು ಸವಾಲು ಮಾಡಲಾಗುವುದಿಲ್ಲ ಎಂದು ಅರ್ಜಿದಾರಿಗೆ ನ್ಯಾಯಪೀಠ ಸೂಚನೆ ನೀಡಿದೆ.

ಜಮ್ಮು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನ ರದ್ದು ಮಾಡಿರುವ ಕ್ರಮವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಹಲವಾರು ಅರ್ಜಿಗಳನ್ನು ಸುಪ್ರೀಂಕೋರ್ಟ್ ಆಗಸ್ಟ್ 2 ರಿಂದ ವಿಚಾರಣೆ ಪ್ರಾರಂಭಿಸಿತ್ತು 16 ದಿನಗಳ ವಿಚಾರಣೆಯ ನಂತರ ಸುಪ್ರೀಂ ತನ್ನ ತೀರ್ಪನ್ನು ಸೆಪ್ಟೆಂಬರ್ 5 ರಂದು ಕಾಯ್ದಿರಿಸಿತ್ತು.ಕೇಂದ್ರ ಸರ್ಕಾರದ ಪರ ಸುಪ್ರೀಂಕೋರ್ಟ್‌ನಲ್ಲಿ ಅಟಾರ್ನಿ ಜನರಲ್ ಆರ್ ವೆಂಕಟರಮಣಿ, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಹಿರಿಯ ವಕೀಲರಾದ ಹರೀಶ್ ಸಾಳ್ವೆ, ರಾಕೇಶ್ ದ್ವಿವೇದಿ, ವಿ ಗಿರಿ ಮತ್ತು ಇತರರು ಮತ್ತು 370 ನೇ ವಿಧಿಯ ನಿಬಂಧನೆಗಳ ರದ್ದತಿ ಸಮರ್ಥಿಸಿಕೊಂಡಿದ್ದರು

ಅರ್ಜಿದಾರರ ಪರವಾಗಿ ಹಿರಿಯ ನ್ಯಾಯವಾದಿ ಕಪಿಲ್ ಸಿಬಲ್, ಗೋಪಾಲ್ ಸುಬ್ರಮಣಿಯಂ, ರಾಜೀವ್ ಧವನ್, ಜಾಫರ್ ಶಾ ಮತ್ತು ದುಷ್ಯಂತ್ ದವೆ ಸೇರಿದಂತೆ ಹಿರಿಯ ವಕೀಲರು ವಾದ ಮಂಡಿಸಿದ್ದರು.

**ಭದ್ರತೆ ಬಿಗಿ:** ಆರ್ಟಿಕಲ್ 370 ರ ಸುಪ್ರೀಂ ತೀರ್ಪಿನ ಮೊದಲು ಕಾಶ್ಮೀರದಾದ್ಯಂತ ಭದ್ರತೆ ಹೆಚ್ಚಿಸಲಾಗಿದೆ ಜಮ್ಮು ಮತ್ತು ಕಾಶ್ಮೀರದ ಸೂಕ್ಷ್ಮ ಭಾಗಗಳಲ್ಲಿ, ವಿಶೇಷವಾಗಿ ಬೇಸಿಗೆಯ ರಾಜಧಾನಿ ಶ್ರೀನಗರ ಮತ್ತು ಪಕ್ಕದ ಪ್ರದೇಶಗಳಲ್ಲಿ ಅಧಿಕಾರಿಗಳು ಭದ್ರತಾ ವ್ಯವಸ್ಥೆ ಬಲಪಡಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಗೃಹ ಬಂಧನ:** ಸುಪ್ರೀಂಕೋರ್ಟ್ ತೀರ್ಪು ನೀಡುವ ಮುನ್ನ ಮಾಜಿ ಮುಖ್ಯಮಂತ್ರಿ ಮೆಹಬೂಬಾ ಮುಫ್ತಿ ನೇತೃತ್ವದ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ ನಾಯಕರು ತಮ್ಮನ್ನು ಗೃಹಬಂಧನದಲ್ಲಿ ಇರಿಸಲಾಗಿತ್ತು. ಮಾಜಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಸೇರಿದಂತೆ ಪ್ರಮುಖ ನಾಯಕರ ನಿವಾಸದ ಗುಪ್ಕರ್ ರಸ್ತೆಯ ಮೇಲೆ ಕೆಲವು ನಿರ್ಬಂಧ ಹಾಕಲಾಗಿದೆ.

ಮೆಹಬೂಬಾ ಅವರ ಪುತ್ರಿ ಇಲ್ತಿಜಾ ಮುಫ್ತಿ ಅವರನ್ನು ನಗರದ ಹೊರವಲಯದಲ್ಲಿರುವ ಅವರ ಖಿಂಬರ್ ನಿವಾಸದಲ್ಲಿ ಗೃಹಬಂಧನದಲ್ಲಿ ಇರಿಸಲಾಗಿದೆ. ಮೆಹಬೂಬ ಅವರಲ್ಲದೆ ಅನೇಕ ನಾಯಕರನ್ನು ಮುನ್ನೆಚ್ಚರಿಕೆಯ ಕ್ರಮವಾಗಿ ಗೃಹ ಬಂಧನದಲ್ಲಿ ಇರಿಸಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ

ಈ ನಡುವೆ ಪ್ರತಿಕ್ರಿಯಿಸಿದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಜಮ್ಮು ಕಾಶ್ಮೀರದ ಯಾವ ನಾಯಕರನ್ನು ಗೃಹ ಬಂಧನದಲ್ಲಿ ಇರಿಸಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ

## ಮಹಿಳೆ ಬೆತ್ತಲೆ: ಸಂತ್ರಸ್ತೆ ಭೇಟಿ ಮಾಡಿದ ಗೃಹ ಸಚಿವ

» **ಬೆಳಗಾವಿ**

ಜಿಲ್ಲೆಯಲ್ಲಿ ಮಹಿಳೆಯನ್ನು ಬೆತ್ತಲೆಗೊಳಿಸಿ ಕಂಬಕ್ಕೆ ಕಟ್ಟಿ ಹಾಕಿ ಹಲ್ಲೆ ಮಾಡಿರುವ ಅಮಾನವೀಯ ಘಟನೆಗೆ ಗೃಹಸಚಿವ ಜಿ.ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ. ಇದಕ್ಕೂ ಮುನ್ನ ಬೆಳಗಾವಿಯ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಹಲ್ಲೆಗೊಳಗಾದ ಮಹಿಳೆಯ ಆರೋಗ್ಯವನ್ನು ಗೃಹ ಸಚಿವರು ವಿಚಾರಿಸಿದರು.

ಹಲ್ಲೆಗೊಳಗಾದ ಮಹಿಳೆಯಿಂದ ಗೃಹ ಸಚಿವ ಜಿ ಪರಮೇಶ್ವರ್ ಅವರು ಘಟನೆ ಕುರಿತು ಮಾಹಿತಿ ಪಡೆದು, ಧೈರ್ಯ ತುಂಬಿದರು. ಈ ವೇಳೆ ಗೃಹಸಚಿವರೊಂದಿಗೆ ನಗರ ಪೊಲೀಸ್ ಆಯುಕ್ತ ಎಸ್ ಎನ್ ಸಿದ್ದರಾಮಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಜೊತೆಗಿದ್ದರು.



ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ಡಾ. ಜಿ. ಪರಮೇಶ್ವರ್, 24 ವರ್ಷದ ಯುವಕ ಯುವತಿಯನ್ನು ಜತೆಗೆ ಕರೆದುಕೊಂಡು ಹೋಗಿದ್ದಾನೆ. ಹುಡುಗ ಹುಡುಗಿ ಪ್ರೀತಿಸುತ್ತಿದ್ದರು ಎನ್ನುವ ಮಾಹಿತಿ ಇದೆ. ಇದರಿಂದ ಯುವಕನ ತಾಯಿ ಮೇಲೆ ಹಲ್ಲೆ ಮಾಡಿದ್ದಾರೆ. ಸುಮಾರು 8 ರಿಂದ 10 ಜನ ಹಲ್ಲೆ ಮಾಡಿ ಬೆತ್ತಲೆಗೊಳಿಸಿ ಕಂಬಕ್ಕೆ ಕಟ್ಟಿದ್ದಾರೆ.

ಪೊಲೀಸರಿಗೆ ವಿಷಯ ತಿಳಿದ ಬಳಿಕ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದಾರೆ. ಸದ್ಯ ಅವರಿಗೆ ಚಿಕಿತ್ಸೆ ನಡೆಯುತ್ತಿದೆ. ಪೊಲೀಸರು ಈಗಾಗಲೇ 7 ಜನರನ್ನು ಬಂಧಿಸಿದ್ದಾರೆ. ಇನ್ನಿಬ್ಬರು ಆರೋಪಿಗಳನ್ನು ಬಂಧಿಸಬೇಕಿದೆ. ಅವರನ್ನೂ ಸಹ ಪೊಲೀಸರು ಬಂಧನ ಮಾಡುತ್ತಾರೆ ಎಂದರು. ಓಡಿ ಹೋಗಿರುವ ಯುವಕ ಯುವತಿಯನ್ನು ಪೊಲೀಸರು ಹುಡುಕಾಡುತ್ತಿದ್ದಾರೆ.


ಪುಟ 2


## ಕಾಡುಗೊಲ್ಲ ಸಮುದಾಯದ ಬೇಡಿಕೆ ಸಿಎಂ ಸಲ್ಲಿಸಿದ ನಿಯೋಗ

**ಬೆಳಗಾವಿ:** ಸಚಿವರಾದ ಡಿ.ಸುಧಾಕರ್, ಶಿವರಾಜ್ ತಂಗಡಗಿ ಹಾಗೂ ರಾಜ್ಯ ಸರ್ಕಾರದ ದೆಹಲಿ ಪ್ರತಿನಿಧಿಯವರಾದ ಟಿ.ಬಿ.ಜಯಚಂದ್ರ ಮತ್ತು ಚಿತ್ರದುರ್ಗ ಜಿಲ್ಲೆಯ ಶಾಸಕರಾದ ವೀರೇಂದ್ರ ಪಪ್ಪಿ, ವೆಂಕಟೇಶ್ ಪಾವಗಡ, ರಘುಮೂರ್ತಿ, ಶ್ರೀನಿವಾಸ್ ಗುಬ್ಬಿ, ಕುಣಿಗಲ್ ರಂಗನಾಥ್, ಬಿ.ಜಿ.ಗೋವಿಂದಪ್ಪ , ಅರಸೀಕೆರೆ ಶಿವಲಿಂಗೇಗೌಡರ ನೇತೃತ್ವದಲ್ಲಿ ಕಾಡುಗೊಲ್ಲ ಸಮುದಾಯದ ಮುಖಂಡರುಗಳು ಇಂದು ಸುವರ್ಣಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ಹಲವು ಬೇಡಿಕೆಗಳ ಒತ್ತಾಯಿಸಿ ಮನವಿ ಅರ್ಪಿಸಿದರು.

**ಕಾಡುಗೊಲ್ಲ ಸಮುದಾಯದ ಬೇಡಿಕೆಗಳು.:** *ಕಾಡುಗೊಲ್ಲ ಜನಾಂಗಕ್ಕೆ ಪ್ರೊ.ಎಂ.ಅನ್ನಪೂರ್ಣ ಅವರ ಕುಲಶಾಸ್ತ್ರೀಯ ಅಧ್ಯಯನ ವರದಿಯ ಆಧಾರದ ಮೇಲೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ಸಿಂಧುತ್ವ ಪ್ರಮಾಣ ಪತ್ರವನ್ನು ನೀಡಲು ಸುತ್ತೋಲೆ ಹೊರಡಿಸಬೇಕು.

## ಪ್ರಮುಖ ಸುದ್ದಿ

# ವಿರೋಧ ಪಕ್ಷ ಯಾವುದೇ ವಿಚಾರ ಎತ್ತಿದರೂ ಕೂಡ ಉತ್ತರ ಕೊಡಲು ಸರ್ಕಾರ ಸಿದ್ಧವಿದೆ: ಸಿಎಂ

» **ಬೆಳಗಾವಿ**

ವಿರೋಧ ಪಕ್ಷಗಳು ಯಾವುದೇ ವಿಚಾರ ಎತ್ತಿದರೂ ಕೂಡ ಉತ್ತರ ಕೊಡಲು ಸರ್ಕಾರ ಸಿದ್ಧವಿದೆ. ಯಾವುದೇನ್ನೂ ವಿಳಂಬ ಅಥವಾ ಕಾಲಹರಣ ಮಾಡುವುದಿಲ್ಲ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಬೆಳಗಾವಿಯಲ್ಲಿ ಮಾಧ್ಯಮದವರೊಂದಿಗೆಮಾತನಾಡಿದರು. ಇವತ್ತಿನವರೆಗೆಯೂ ಬರಗಾಲದ ಚರ್ಚೆಯಾಯಿತು. ಇಂದು ಅದಕ್ಕೆ ಉತ್ತರ ನೀಡುತ್ತೇವೆ. ಈಗಾಗಲೇ ಪ್ರಸ್ತಾಪವಾಗಿರುವ ಬಗ್ಗೆ ಉತ್ತರ ನೀಡುತ್ತೇವೆ ಎಂದರು.

**ಬಿಜೆಪಿಯೊಳಗೆ ಸಮನ್ವಯ ಸಾಧ್ಯವೇ ಇಲ್ಲ:** ಬಿಜೆಪಿ ನಾಯಕರ ಮಧ್ಯೆ ಸಮನ್ವಯದ ಕೊರತೆಯಿಂದ ಕಲಾಪದ ಸಮಯ ವ್ಯರ್ಥವಾಗುತ್ತಿದೆ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ ಬಿಜೆಪಿಯೊಳಗೆಎಂದಿಗೂಸಮನ್ವಯ



ಇಲ್ಲವೇ ಇಲ್ಲ. ಅವರು ಆಪರೇಷನ್ ಕಮಲದ ಮುಖಾಂತರ ಅಧಿಕಾರಕ್ಕೆ ಬಂದಿದ್ದಾರೆ. ನಂತರ ಜನ ಅವರನ್ನು ತಿರಸ್ಕರಿಸಿದ್ದಾರೆ. ನಂತರ ಸಮನ್ವಯ ಬರಲು ಸಾಧ್ಯವೇ ಇಲ್ಲ. ಅವರಲ್ಲಿ ಎರಡು ಗುಂಪುಗಳಿವೆ ಎಂದರು.

**ತಪ್ಪಿತಸ್ಥರ ವಿರುದ್ಧ ಕ್ರಮ:** ಬೆಳಗಾವಿಯಲ್ಲಿ ಮಹಿಳೆಯೊಬ್ಬರ ಮೇಲೆ ದೌರ್ಜನ್ಯವೆಸಗಿರುವ ಬಗ್ಗೆ ಮಾತನಾಡಿ ಯಾರು ತಪ್ಪಿತಸ್ಥರೊ ಅವರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

**ಪಂಚಾಮಸಾಲಿ ನಾಯಕರು ಹಾಗೂ ಸ್ವಾಮೀಜಿ ಯವರೊಂದಿಗೆ ಮಾತನಾಡುತ್ತೇನೆ:** ಪಂಚಾಮಸಾಲಿ ನಾಯಕರ ಮನವಿಗೆ ಸ್ಪಂದಿಸಿಲ್ಲ ಎಂದು ಸ್ವಾಮೀಜಿಗಳು 13 ರಂದುವಿಧಾನಸಭೆ ಅಧಿವೇಶನ ಮುಗಿದ ನಂತರ ಅವರೊಂದಿಗೆ ಚರ್ಚೆ ಮಾಡಲಾಗುತ್ತವೆ ಎಂದು ತಿಳಿಸಲಾಗಿದೆ ಎಂದರು. ಬೆಳಗಾವಿಯಲ್ಲಿ ಪಂಚಾಮಸಾಲಿ ನಾಯಕರು ಹಾಗೂ ಸ್ವಾಮೀಜಿ ಯವರೊಂದಿಗೆ ಮಾತನಾಡುತ್ತೇನೆ ಎಂದರು.

**ವಿಧಾನಸಭಾಧ್ಯಕ್ಷರಿಗೆ ಸಂಬಂಧಿಸಿದ್ದು:** ಸುವರ್ಣ ಸೌಧದಲ್ಲಿರುವ ಸಾರ್ವರ್ಕರ್ ಫೋಟೋ ತೆಗೆಯುವ ಬಗ್ಗೆ ಸಚಿವ ಪ್ರಿಯಾಂಕ ಖರ್ಗೆ ಮಾತನಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅದು ವಿಧಾನಸಭಾಧ್ಯಕ್ಷರಿಗೆ ಸಂಬಂಧಿಸಿದ್ದು ಎಂದರು.

**ಬಿಜೆಪಿಮತ್ತುಜೆಡಿಎಸ್ಭ್ರಮಾಲೋಕದಲ್ಲಿದ್ದಾರೆ:** ಸರ್ಕಾರ ಪತನವಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿ ಬಿಜೆಪಿ ಮತ್ತು ಜೆಡಿಎಸ್ ನೀರಿನಿಂದ ತೆಗೆದ ಮೀನಿನಂತೆ ವಿಲಿ ವಿಲಿ ಎಂದು ಒದ್ದಾಡುತ್ತಿದ್ದು, ಭ್ರಮಾಲೋಕದಲ್ಲಿದ್ದಾರೆ ಎಂದರು.

## ಫಾಸ್ಟ್ ನ್ಯೂಸ್

### ಸೀತಾಭಾಯಿ ನಿಧನ

» **ಹೊಳಲ್ಕೆರೆ**

ತಾಲೂಕಿನ ಗುಲಗಂಜಿ ಹಟ್ಟಿ ಗ್ರಾಮದ ವಾಸಿಯಾಗಿರುವ ಶತಾಯುಷಿ ಸೀತಾಭಾಯಿ ಶನಿವಾರ ನಿಧನರಾಗಿದ್ದಾರೆ. ಸೀತಾಬಾಯಿಯವರಿಗೆ 103 ವರ್ಷ ವಯಸ್ಸಾಗಿದ್ದು, ಹೊಳಲ್ಕೆರೆ ತಾಲೂಕಿನ ಹಿರಿಯ ನಾಗರಿಕರಾಗಿ ಶತಾಯುಷಿಗಳಾಗಿ ದೈವಾಧೀನರಾಗಿದ್ದಾರೆ. ಸ್ವಾತಂತ್ರ ಪೂರ್ವದಲ್ಲಿ ಜನಿಸಿದ ಸೀತಾ ಬಾಯಿ ಮೂಲತಃ ಗುಲಗಂಜಿ ಹಟ್ಟಿ ಗ್ರಾಮದವರು. ಉತ್ತಮ ಕೃಷಿಕರಾಗಿ ಮಾದರಿ ಜೀವನವನ್ನು ಕಟ್ಟಿಕೊಳ್ಳುವ ಮೂಲಕ 103 ವರ್ಷ ಸಮಾಜಕ್ಕೆ ಉತ್ತಮ ಸಂದೇಶ ನೀಡಿದ್ದಾರೆ. ಉತ್ತಮ ಕಲಾವಿದರಾಗಿದ್ದ ಅವರು ಲಂಬಾಣಿ ಗೀತೆಗಳು, ಲಂಬಾಣಿ ಸಮುದಾಯಕ್ಕೆ ಸಂಬಂಧಿಸಿದ ಕಲೆ ಸಂಸ್ಕೃತಿ ಆಚಾರ ವಿಚಾರಗಳನ್ನು ಸಂಪ್ರದಾಯಬದ್ಧವಾಗಿ ನೆರವೇರಿಸುವ ಮೂಲಕ ಯುವ ಜನಾಂಗಕ್ಕೆ ಮಾದರಿಯಾಗಿದ್ದರು. ಸೀತಾಬಾಯಿ ಇವರು ಗುಲಗಂಜಿ ಹಟ್ಟಿಯಲ್ಲಿ ಲಕ್ಷ್ಮಣ ನಾಯ್ಕ ಎನ್ನುವರನ್ನು ವಿವಾಹವಾಗಿದ್ದರು.

ಇವರಿಗೆ ಮೂರು ಜನ ಹೆಣ್ಣು ಹಾಗೂ ಮೂರು ಜನ ಗಂಡು ಒಟ್ಟು 6 ಜನ ಮಕ್ಕಳನ್ನು ಹೊಂದಿದ್ದು, ಮಕ್ಕಳಿಗೆ 24 ಜನ ಮೊಮ್ಮಕ್ಕಳು, 28ಮರಿಮಕ್ಕಳನ್ನು ಹೊಂದಿದ್ದರು.ಹೊಳಲ್ಕೆರೆ ತಾಲೂಕಿನ ಅತ್ಯಂತ ಹಿರಿಯ ಜೀವ ಶತಾಯುಷಿ ಸೀತಾಬಾಯಿ ನಿಧನಕ್ಕೆ ಹೊಳಲ್ಕೆರೆ ತಾಲೂಕಿನ ಅನೇಕ ಗಣ್ಯರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ .ಅದೇ ರೀತಿಯಾಗಿ ಭಾನುವಾರ ಗುಲಗಂಜಿ ಹಟ್ಟಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುತ್ತದೆ ಎಂದು ಮೊಮ್ಮಗ ಮುಖಂಡ ಬಸವರಾಜ್ ನಾಯ್ಕ ತಿಳಿಸಿದ್ದಾರೆ.

### ಮಹಿಳೆ ಬೆತ್ತಲೆ: ಸಂತ್ರಸ್ತೆ ಭೇಟಿ ಮಾಡಿದ ಸಚಿವ

» **ಮೊದಲ ಪುಟದಿಂದ**

ಇಂತಹ ಘಟನೆಗಳು ಆಗಬಾರದು, ಪೊಲೀಸರಿಗೆ ದೂರು ನೀಡಿದ್ದರೆ ಪೊಲೀಸರೇ ಕ್ರಮ ತೆಗೆದುಕೊಳ್ಳುತ್ತಿದ್ದರು. ಅಥವಾ ಊರಲ್ಲಿ ಹಿರಿಯರು ಮಾತನಾಡಿಕೊಂಡು ಬಗೆಹರಿಸಬಹದಿತ್ತು. ಆದರೆ ಇದೊಂದು ಅಮಾನವೀಯ ಘಟನೆ. ಸ್ಥಳಕ್ಕೂ ಕೂಡ ಭೇಟಿ ನೀಡಿ ಪರಿಶೀಲನೆ ನಡೆಸುತ್ತೇನೆ ಎಂದು ಗೃಹ ಸಚಿವರು ಹೇಳಿದರು.ಗೃಹ ಸಚಿವರ ಕಾಲಿಗೆ ಬಿದ್ದು ಕಣ್ಣೀರು ಹಾಕಿದ ಅಜ್ಜಿ: ಮಹಿಳೆಯನ್ನು ಬೆತ್ತಲೆಗೊಳಿಸಿ ಅಮಾನವೀಯವಾಗಿ ಹಲ್ಲೆ ಮಾಡಿದ್ದರಿಂದ ಅವರ ಕುಟುಂಬಸ್ಥರು ಸೇರಿ ಇಡೀ ಗ್ರಾಮವೇ ಬೆಚ್ಚಿಬಿದ್ದಿದೆ. ಘಟನೆ ಬಗ್ಗೆ ಮಾಹಿತಿ ಪಡೆಯಲು ಬಂದ ವೇಳೆ ಆ ಕುಟುಂಬದ ಅಜ್ಜಿ ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರ ಕಾಲಿಗೆ ಬಿದ್ದು ಕಣ್ಣೀರು ಹಾಕಿದರು.ಬೆಳಗಾವಿಯ ಜಿಲ್ಲಾಸ್ಪತ್ರೆಯಲ್ಲಿ ಸಂತ್ರಸ್ತ ಮಹಿಳೆಯ ಆರೋಗ್ಯ ವಿಚಾರಿಸಿದ ಬಳಿಕ ನೇರವಾಗಿ ಮಹಿಳೆಯ ಮನೆಗೆ ಸಚಿವರು ಭೇಟಿ ನೀಡಿದ್ದರು. ಈ ವೇಳೆ ಯುವತಿಯ ಜೊತೆ ಓಡಿ ಹೋಗಿರುವ ಯುವಕನ ಅಜ್ಜಿ ಘಟನೆಯ ಬಗ್ಗೆ ಪರಮೇಶ್ವರ್ ಅವರಿಗೆ ಮಾಹಿತಿ ನೀಡಿದರು. ಈ ಸಂದರ್ಭ ಸಚಿವರ ಕಾಲಿಗೆ ಬಿದ್ದು ಅಜ್ಜಿ ಕಣ್ಣೀರು ಹಾಕಿ, ಮೈಮೇಲೆ ಇರುವ ಬಂಗಾರವನ್ನು ತೆಗೆದುಕೊಂಡು ಹೋಗಿದ್ದಾರೆ. ಬೆತ್ತಲೆ ಮಾಡಿ ಹಲ್ಲೆ ಮಾಡಿದ್ದಾರೆ ಎಂದು ಗೋಗರೆದರು. ಅಜ್ಜಿಯನ್ನು ಸಚಿವರು ಸಮಾಧಾನಪಡಿಸಲು ಯತ್ನಿಸಿದರು. ಘಟನೆಯಿಂದ ಗ್ರಾಮದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ.

### ಕಾಡುಗೊಲ್ಲ ಸಮುದಾಯದ ಬೇಡಿಕೆ ಸಿಎಂ ಸಲ್ಲಿಸಿದ ನಿಯೋಗ



» **ಮೊದಲ ಪುಟದಿಂದ**

ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮವನ್ನು ವ್ಯವಸ್ಥಿತವಾಗಿ, ವೈಜ್ಞಾನಿಕವಾಗಿ ಪುನರ್ ರೂಪಿಸಿ, ನಿಗಮಕ್ಕೆ ಅಧ್ಯಕ್ಷರು ಮತ್ತು ಸದಸ್ಯರಾಗಿ ಕಾಡುಗೊಲ್ಲರನ್ನೇ ನೇಮಿಸಬೇಕು. ನಿಗಮಕ್ಕೆ ವಾರ್ಷಿಕ 200 ಕೋಟಿ ರೂ ಅನುದಾನ ಹಂಚಿಕೆ ಮಾಡಬೇಕು.

ಕಾಡುಗೊಲ್ಲ ಜನಾಂಗವನ್ನು ಅಲೆಮಾರಿ/ ಅರೆ ಅಲೆಮಾರಿ ಜಾತಿ ಪಟ್ಟಿಗೆ ಸೇರಿಸಿ ಆದೇಶ ಹೊರಡಿಸಬೇಕು. ಕಾಡುಗೊಲ್ಲ ಸಮುದಾಯವನ್ನು ಕೇಂದ್ರ ಓಬಿಸಿ ಜಾತಿ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು.

ಕಾಡುಗೊಲ್ಲ/ಹಟ್ಟಿಗೊಲ್ಲ ಜಾತಿಗಳನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸ್ಪರ್ಧಿಸಲು ಅನುವಾಗುವಂತೆ ಚುನಾವಣಾ ಗೆಜೆಟ್ ನಲ್ಲಿ ಹಿಂದುಳಿದ ವರ್ಗ, ಪ್ರವರ್ಗ, ಎ - ಬಿ (ಬಿಸಿಎಂ-ಎ) ಚುನಾವಣಾ ಜಾತಿ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಸಂಬಂಧಿಸಿದವರಿಗೆ ಸೂಕ್ತ ನಿರ್ದೇಶನ ನೀಡಬೇಕು.

ಕಾಡುಗೊಲ್ಲ ಸಂಘದ ರಾಜ್ಯಾಧ್ಯಕ್ಷರಾದ ರಾಜಣ್ಣ, ಮಹಾಲಿಂಗಪ್ಪ ಗೌರವಾಧ್ಯಕ್ಷರು, ಸಂಘಟನಾ ಕಾರ್ಯದರ್ಶಿ ಪ್ರಭುದೇವ್ ಸೇರಿ ಸಮುದಾಯದ ನೂರಕ್ಕೂ ಅಧಿಕ ಪದಾಧಿಕಾರಿಗಳು ನಿಯೋಗದಲ್ಲಿದ್ದರು.

---

ಕ್ರೀಡಾಪಟುಗಳಿಗೆ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಕಿವಿಮಾತು

# ಪಠ್ಯದ ಜೊತೆಗೆ ಕ್ರೀಡೆಗೂ ಮಾನ್ಯತೆ ನೀಡಿ

» **ಚಿತ್ರದುರ್ಗ**



ಪಠ್ಯದ ಜೊತೆಗೆ ಕ್ರೀಡೆಗೂ ಸಹಾ ಮಾನ್ಯತೆಯನ್ನು ನೀಡಿದಾಗ ಅದು ನಿಮ್ಮ ಮುಂದಿನ ಜೀವನದಲ್ಲಿ ಕೈ ಹಿಡಿಯಲಿದೆ ಎಂದು ಕ್ರೀಡಾಪಟುಗಳಿಗೆ ಮಾದಾರ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಕಿವಿಮಾತು ಹೇಳಿದರು.

ಉಪ ನಿರ್ದೇಶಕರ ಕಚೇರಿ ಶಾಲಾ ಶಿಕ್ಷಣ ಇಲಾಖೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವಿ.ಪಿ.ಬಡಾವಣೆ ಹಾಗೂ ಚಿತ್ರದುರ್ಗ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನಗರದ ವಿ.ಪಿ.ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ನವದೆಹಲಿ ಹಾಗೂ ಉತ್ತರ ಪ್ರದೇಶದಲ್ಲಿ ನಡೆಯುವ ರಾಷ್ಟ್ರೀಯ ಹ್ಯಾಂಡ್‌ಬಾಲ್ ಪಂದ್ಯಾವಳಿಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿದರು. ಮಾನವನಿಗೆ ಕ್ರೀಡೆ ಅಗತ್ಯವಾಗಿದೆ. ಯಾವುದಾದರೊಂದು ಕ್ರೀಡೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕಿದೆ ಆಗ ಮಾತ್ರ ಉತ್ತಮವಾದ ದೇಹವನ್ನು ಹೊಂದಲು ಸಾಧ್ಯವಿದೆ. ತಾವು ಓದುವ ಅಭ್ಯಾಸದ ಜೊತೆಗೆ ಕ್ರೀಡೆಗೂ ಸಹಾ ಮಾನ್ಯತೆಯನ್ನು ನೀಡಬೇಕಿದೆ. ಇದರಿಂದ ನಿಮ್ಮ ಮುಂದಿನ ಬದುಕಿಗೆ ಸಹಾಯವಾಗಲಿದೆ. ನಿಮ್ಮ ಉದ್ಯೋಗದ ನೇಮಕಾತಿಯಲ್ಲಿ ಕ್ರೀಡೆಯಲ್ಲಿ ಭಾಗವಹಿಸಿದವರಿಗೆ ಮನ್ನಣೆಯನ್ನು ನೀಡುತ್ತಾರೆ ಇದರಿಂದ ಕ್ರೀಡೆಯಲ್ಲಿ ಭಾಗವಹಿಸುವುದು ಅಗತ್ಯವಾಗಿದೆ ಎಂದ ಶ್ರೀಗಳು, ವಿದ್ಯಾರ್ಥಿ ಜೀವನ ಮತ್ತೇ ಬರುವುದಿಲ್ಲ ಅದು ಬಂದಾಗ ಅನುಭವಿಸಬೇಕಿದೆ ಇಲ್ಲಿ ಸ್ನೇಹಿತರರೊಂದಿಗೆ ಕೂಡಿಕೊಂಡು ಆಟವನ್ನು ಆಡುವುದು ಓದುವುದು ಮಾಡಬೇಕಿದೆ ಇದರಿಂದ ನಿಮ್ಮ ಬದುಕಿನಲ್ಲಿ ಆತ್ಮ ವಿಶ್ವಾಸ ಬೆಳೆಯುತ್ತದೆ ಎಂದರು. ನೀವುಗಳ ಭಾಗವಹಿಸುವ ಕ್ರೀಡೆಯಲ್ಲಿ ವಿಜೇತರಾಗಿ ಬನ್ನಿ ಇದರಿಂದ ನಮ್ಮ ರಾಜ್ಯ ಮತ್ತು ಜಿಲ್ಲೆಯ ಹೆಸರು ಬೆಳದಂತೆ ಆಗುತ್ತದೆ. ಕ್ರೀಡೆ ಎಂದ ಮೇಲೆ ಸೋಲು-ಗೆಲುವು ಸಾಮಾನ್ಯ ಆದರೂ ಸಹಾ ನೀವು ಗೆಲ್ಲುವ ರೀತಿಯಲ್ಲಿ ಪ್ರದರ್ಶನವನ್ನು ನೀಡಬೇಕಿದೆ, ನಮ್ಮ ಜಿಲ್ಲೆಯವರು ರಾಷ್ಟ್ರ ಮಟ್ಟದಲ್ಲಿ ಕ್ರೀಡೆಯನ್ನು ಪ್ರದರ್ಶನ ಮಾಡುವುದು ಉತ್ತಮವಾದ ಅವಕಾಶವಾಗಿದೆ ಇದರ ಸದುಪಯೋಗ ಪಡೆದುಕೊಳ್ಳಿ ಹೋಗುವಾಗ ಬರುವಾಗ ಸರಿಯಾದ ರೀತಿಯಲ್ಲಿ ಇರಿ ರೈಲಿನಲ್ಲಿ ಎಲ್ಲಿ ಬೇಕೆಂದರೆ ಅಲ್ಲಿ ಇಳಿಯಬೇಡಿ ಕ್ಷೇಮವಾಗಿ ಹೋಗಿ ಬನ್ನಿ ಈ ಕ್ರೀಡಾಕೂಟದಲ್ಲಿ ಬಾಲಕ ಮತ್ತು ಬಾಲಕಿಯರ ತಂಡದಲ್ಲಿ ನಮ್ಮ ಜಿಲ್ಲೆಯವರೇ ನಾಯಕರಾಗಿರುವುದು ಇನ್ನೂ ಸಂತೋಷದ ಸಂಗತಿಯಾಗಿದೆ ಎಂದು ಮಾದಾರ ಚನ್ನಯ್ಯ ಶ್ರೀಗಳು ತಿಳಿಸಿದರು.ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ನಾಗಭೂಷಣ್ ಮಾತನಾಡಿ, ಪಠ್ಯ ಮತ್ತು ಕ್ರೀಡೆ ವಿದ್ಯಾರ್ಥಿಯ ಜೀವನದ ಭಾಗವಾಗಬೇಕಿದೆ ಆಗ ಮಾತ್ರ ಉತ್ತಮವಾದ ಕ್ರೀಡಾಪಟುವಾಗಲು ಸಾಧ್ಯವಿದೆ. ಕ್ರೀಡೆಯನ್ನು ಕ್ರೀಡಾ ಮನೋಭಾವದಿಂದ ಸ್ವೀಕಾರ ಮಾಡಬೇಕಿದೆ.

ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿದವರಿಗೆ ಹಲವಾರು ಅವಕಾಶಗಳು ಮುಂದೆ ಒದಗಿಬರಲಿವೆ. ಈ ಚಿತ್ರದುರ್ಗ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆಗೆ ಶ್ರೀಗಳು ಅಧ್ಯಕ್ಷರಾಗಿರುವುದು ಇನ್ನೂ ಸಂತೋಷದ ವಿಷಯವಾಗಿದೆ. ಇಲ್ಲಿ ಶ್ರೀಗಳು ಸಹಾ ವಿವಿಧ ರೀತಿಯ ಕ್ರೀಡೆಯನ್ನು ನಡೆಸುವುದರ ಮೂಲಕ ಕ್ರೀಡಾ ಪ್ರೇಮಿಗಳಾಗಿ ಕ್ರೀಡಾ ಪ್ರೋತ್ಸಾಹಕರಾಗಿದ್ದಾರೆ. ಮಕ್ಕಳಿಎಗ ಪ್ರೋತ್ಸಾಹ ನೀಡುವುದರ ಮೂಲಕ ಅವರನ್ನು ಉತ್ತಮ ಕ್ರೀಡಾಪಟುಗಳನ್ನಾಗಿ ಮಾಡಬೇಕಿದೆ ಎಂದರು.

ಚಿತ್ರದುರ್ಗ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಕೆ.ಹೆಚ್.ಶಿವರಾಮ್ ಮಾತನಾಡಿ, ಡಿಸೆಂಬರ್ 12 ರಿಂದ 16ರವರೆಗೆ ದೆಹಲಿಯಲ್ಲಿ ನಡೆಯುವ 14 ವರ್ಷದೊಳಗಿನ ಬಾಲಕ / ಬಾಲಕಿಯರ ರಾಷ್ಟ್ರೀಯ ಹ್ಯಾಂಡ್‌ಬಾಲ್ ಪಂದ್ಯಾವಳಿ ಹಾಗೂ ದಿನಾಂಕ ಡಿಸೆಂಬರ್ 15 ರಿಂದ 20 ರವರೆಗೆ ಉತ್ತರ ಪ್ರದೇಶದ ವಾರಣಾಸಿಯಲ್ಲಿ ನಡೆಯುವ 20ವರ್ಷದೊಳಗಿನ ಬಾಲಕಿಯರ ರಾಷ್ಟ್ರೀಯ ಹ್ಯಾಂಡ್‌ಬಾಲ್ ಪಂದ್ಯಾವಳಿ ನಡೆಯಲಿದೆ ಇದರಲ್ಲಿ ಭಾಗವಹಿಸಲು ಚಿತ್ರದುರ್ಗ ಜಿಲ್ಲೆಯಿಂದ 11 ಕ್ರೀಡಾಪಟುಗಳು ಹೋಗಲಿದ್ದಾರೆ.

ದೆಹಲಿಯಲ್ಲಿ ನಡೆಯಲಿರುವ 14 ವರ್ಷದ ಬಾಲಕ, ಬಾಲಕಿಯರಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಜ್ವಲ್ ಎನ್. ದಿಗಂತ ಕುಮಾರ್ ಎನ್, ಪುಷ್ಪಲತಾ ಎಸ್, ಚಿನ್ಮೂಲಾದ್ರಿ ಪ್ರೌಢಶಾಲೆಯ ಮಂಜುನಾಥ್ ಆರ್, ತೇಜಸ್ವಿನಿ ಎಸ್.ಚಳ್ಳಕೆರೆಯ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ಸುನೀಲ್ ಡಿ.ಎಂ.ಪಲ್ಲವಿ ಎನ್, ಮೊರಾರ್ಜಿ ಧೇಸಾಯಿ ವಸತಿ ಶಾಲೆಯ ಸುನಿಲ್ ಎ. ಹಾಗೂ ಡಿ.16 ರಿಂದ ಉತ್ತರ ಪ್ರದೇಶದಲ್ಲಿ ನಡೆಯಲಿರುವ 20 ವರ್ಷ ಬಾಲಕಿಯರ ವಿಭಾಗದಲ್ಲಿ ವೆಸ್ಟ್ರನ್ ಹಿಲ್ಸ್ ಕಾಲೇಜಿನ ಸಾನಿಯ, ಸಂತ ಜೋಸೆಫರ್ ಕಾಲೇಜಿನ ಸುಮ ಎ, ಎಸ್.ಜೆ.ಎಂ.ಕಾಲೇಜಿನ ರಂಜಿತ ಆಯ್ಕೆಯಾಗಿದ್ದಾರೆ ಎಂದರು.

14 ವರ್ಷದೊಳಗಿನ ಬಾಲಕರ ವಿಭಾಗದಲ್ಲಿ ಕರ್ನಾಟಕ ರಾಜ್ಯದ ತಂಡಕ್ಕೆ ನಾಯಕನಾಗಿ ಚಿತ್ರದುರ್ಗದ ಎನ್. ಪ್ರಜ್ವಲ್ ಹಾಗೂ 20ವರ್ಷದ ಬಾಲಕಿಯರ ವಿಭಾಗದ ತಂಡಕ್ಕೆ ನಾಯಕಿಯಾಗಿ ಚಿತ್ರದುರ್ಗದ ಸಾನಿಯ ರವರು ಆಯ್ಕೆಯಾಗಿದ್ದಾರೆ. ಇದು ಜಿಲ್ಲೆಗೆ ದೂರೆತ ಗೌರವವಾಗಿದೆ ಎಂದು ಶಿವರಾಮ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆಯ ಉಪಾಧ್ಯಕ್ಷ ಎಂ.ಹೆಚ್.ಜಯಣ್ಣ, ಖಜಾಂಚಿ, ಸಿ.ಎಸ್.ಪ್ರಮಾನಂದ್, ಚಿದಾನಂದಪ್ಪ, ರವಿಶಂಕರ್, ದೈಹಿಕ ನಿರ್ದೇಶಕರಾದ ಸಂಪತ್, ರವಿಶಂಕರ್, ಚಿನ್ಮೂಲಾದ್ರಿ ಶಾಲೆಯ ಮುಖ್ಯೋಪಾಧ್ಯಯರಾದ ರಘು, ವಿ.ಪಿ.ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಯರಾದ ಸುರೇಶ್ ಭಾಗವಹಿಸಿದ್ದರು.

---

# ನಿಜಲಿಂಗಪ್ಪ ಬದುಕಿನ ಪಯಣ ವಿವಿ ಪಠ್ಯವಾಗಬೇಕು

» **ಚಿತ್ರದುರ್ಗ**



ರಾಜಕಾರಣಕ್ಕೆ ಮಾದರಿಯಾಗಿ ಬದುಕಿದ ದಿವಂಗತ ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪ ಅವರ ಜೀವನ, ಬದುಕಿನ ಪಯಣ ವಿಶ್ವ ವಿದ್ಯಾಲಯದಲ್ಲಿ ಪಠ್ಯವಾಗಬೇಕು. ಈ ಮೂಲಕ ಯುವ ಪೀಳಿಗೆಗೆ ಅವರ ಆದರ್ಶಗಳನ್ನು ತಿಳಿಸುವ ಕಾರ್ಯವಾಗಬೇಕು ಎಂದು ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಸರ್ಕಾರಕ್ಕೆ ಒತ್ತಾಯಿಸಿದರು.

ತಾಲ್ಲೂಕಿನ ಸೀಬಾರದ 'ಪುಣ್ಯಭೂಮಿ'ಯಲ್ಲಿ ಭಾನು ವಾರ ಎಸ್.ನಿಜಲಿಂಗಪ್ಪ ಮೆಮೋರಿಯಲ್ ಟ್ರಸ್ಟ್‌ನಿಂದ ಆಯೋಜಿಸಿದ್ದ ಎಸ್ಸೆನ್ ಅವರ 121ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ನಿಜಲಿಂಗಪ್ಪ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು,'ಕರ್ನಾಟಕದ ಯಾವುದೇ ರಾಜಕರಣಿಗೂ ರಾಷ್ಟ್ರ ರಾಜಕಾರಣದಲ್ಲಿ ನಿಜಲಿಂಗಪ್ಪ ಅವರಿಗೆ ಸಿಕ್ಕಿದ ಗೌರವ ಸಿಕ್ಕಿಲ್ಲ. ಅಂತಹ ಸ್ಥಾನಮಾನ ಸಿಕ್ಕಿದೆ. ನಿಜಲಿಂಗಪ್ಪ ಅವರ ಬಗ್ಗೆ ಅಧ್ಯಯನ ನಡೆಸುವವರಿಗೆ ಸರ್ಕಾರ ಆರ್ಥಿಕ ನೆರವು ನೀಡಬೇಕು' ಎಂದು ಒತ್ತಾಯಿಸಿದರು.

'ಜೀವನದಲ್ಲಿ ಅಧಿಕಾರ ಮುಖ್ಯ ಅಲ್ಲವೇ ಅಲ್ಲ, ಆದರ್ಶವೇ ಮುಖ್ಯ ಎಂದು ನಿಜಲಿಂಗಪ್ಪ ಕೊನೆಯ ಕ್ಷಣದವರೆಗೆ ಬದುಕಿದರು. ಅಂದಿನ ರಾಜಕಾರಣಕ್ಕೂ, ಇಂದಿನ ರಾಜಕಾರಣಕ್ಕೂ ಎಳ್ಳು ಕಾಳಷ್ಟು ಸಾಮ್ಯತೆ ಇಲ್ಲ. ಭ್ರಷ್ಟಾಚಾರದ ಸೋಂಕು ಅಂದಿನ ರಾಜಕಾರಣ ಇರಲಿಲ್ಲ' ಎಂದರು.

ಕಾಲಕ್ರಮೇಣ ಮರೆಯುವುದು ಮನುಷ್ಯನ ಸ್ವಭಾವ ಆಗಿದೆ. ಆದ್ದರಿಂದ ಪದೇ ಪದೇ ಇಂತಹ ನಾಯಕರ ಸ್ಮರಣೆ ಆಗಬೇಕು. ಭ್ರಷ್ಟಾಚಾರ ರಹಿತ, ಕುಟುಂಬ, ಪರಿವಾರ ರಹಿತ ರಾಜಕಾರಣ ನಡೆದಾಗ ಮಾತ್ರ ನಿಜಲಿಂಗಲಿಪ್ಪ ಅವರಿಗೆ ನಿಜವಾದ ಗೌರವ ಸಲ್ಲುತ್ತದೆ' ಎಂದು ತಿಳಿಸಿದರು.'ನಿಸ್ವಾರ್ಥ ಸೇವೆ ಸಲ್ಲಿಸಿದ ಕಾರಣಕ್ಕೆ ಅವರು ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದರು. ಅದು ಅವರ ರಾಜಕೀಯ ಜೀವನವನ್ನು ತೋರಿಸುತ್ತದೆ. ನನ್ನ ತಾತ ನಿಜಲಿಂಗಪ್ಪ ಅವರ ಬಲಗೈ ಬಂಟನಂತೆ ಹಲವು ದಶಕಗಳ ಕಾಲ ಇದ್ದರು. ಹಾಗಾಗಿ ಹತ್ತಿರದಿಂದ ನೋಡಿದ್ದೇನೆ. ಶುದ್ಧ ರಾಜಕಾರಣಕ್ಕೆ ನನಗೆ ಪ್ರೇರಣೆಯಾಗಿದ್ದಾರೆ' ಎಂದರು.ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಶ್ರೀಮಾದಾರ ಚನ್ನಯ್ಯ ಸ್ವಾಮೀಜಿ ಮಾತನಾಡಿ, 'ನಿಜಲಿಂಗಪ್ಪ ಅವರ ರಾಜಕಾರಣದ ಅವಶ್ಯಕತೆ ಇಂದಿನ ಭಾರತಕ್ಕೆ ಅಗತ್ಯವಾಗಿದೆ. ಮಾಜಿ ಮುಖ್ಯಮಂತ್ರಿ ಆಗಿದ್ದರೂ, ಜೀವನವಿಡೀ ಅವರ ಮನೆ ಮುಂದೆ ಒಂದು ಸ್ವಂತ ಕಾರು ನಿಲ್ಲಲಿಲ್ಲ ' ಎಂದು ತಿಳಿಸಿದರು.

'ಮಧ್ಯ ಕರ್ನಾಟಕದ ಚಿತ್ರದುರ್ಗಕ್ಕೆ ಅವರು ಏನು ಮಾಡಲಿಲ್ಲ ಎನ್ನುವ ಆಪಾದನೆ ಇದೆ. ಹಾಗೇ ನೋಡಿದರೆ ಅವರ ಸ್ವಂತ ಜೀವನಕ್ಕೂ ಏನೂ ಮಾಡಿಕೊಳ್ಳಲಿಲ್ಲ. ಅಧಿಕಾರದ ಅವಧಿಯಲ್ಲಿ ನನ್ನ ಊರು, ಹುಟ್ಟೂರು ಎಂದು ಚಿಂತಿಸಿದರೆ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದರು' ಎಂದು ಸ್ಮರಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ, 'ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪ ಅವರ ಕಾಲದ ರಾಜಕಾರಣಕ್ಕೂ ಇಂದಿನ ರಾಜಕಾರಣಕ್ಕೂ ಅಜಗಜಾಂತರ ವ್ಯತ್ಯಾಸ ಇದೆ. ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಪಕ್ಷವನ್ನು ಸಮರ್ಥವಾಗಿ ಮುನ್ನಡೆಸಿದ್ದರು. ಅವರ ಪರಿಶುದ್ಧ ರಾಜಕಾರಣ ಇಂದೂ ಕಷ್ಟಸಾಧ್ಯ. ಆದರೂ, ಮುಂದಿನ ಪೀಳಿಗೆ ಈ ನಿಟ್ಟಿನಲ್ಲಿ ಪ್ರಯತ್ನ ಮಾಡಬೇಕು' ಎಂದರು.'ಈ ನೆಲಕ್ಕೆ ಭದ್ರಾ ಮೇಲ್ದಂಡೆ ಯೋಜನೆ ಆಗಬೇಕು ಎನ್ನುವುದು ಅವರ ಕನಸಾಗಿತ್ತು. ಅಂದು ಕೇಂದ್ರ ಸಚಿವರಾಗಿದ್ದ ಮನಮೋಹನ್ ಸಿಂಗ್ ಅವರನ್ನು ಜಿಲ್ಲೆಗೆ ಆಹ್ವಾನಿಸಿ ಯೋಜನೆಯನ್ನು ಘೋಷಣೆ ಮಾಡಿಸಿದ್ದರು. ನಮ್ಮ ಸರ್ಕಾರದ ಅವಧಿಯಲ್ಲಿ ಯೋಜನೆ ಪೂರ್ಣಗೊಳ್ಳಲಿದೆ' ಎಂದು ತಿಳಿಸಿದರು.ಎಸ್.ಎನ್.ಮೆಮೋರಿಯಲ್ ಟ್ರಸ್ಟ್ ಗೌರವ ಕಾರ್ಯದರ್ಶಿ ಎಚ್. ಹನುಮಂತಪ್ಪ ಮಾತನಾಡಿ, 'ಜನಪ್ರತಿನಿಧಿಗಳಿಗೆ ಶಿಕ್ಷಣ ಕೊಡುವುದು ನಮ್ಮ ಉದ್ದೇಶವಾಗಿದೆ. ಪಂಚಾಯಿತಿಯಿಂದ ಪಾರ್ಲಿಮೆಂಟ್‌ವರೆಗೆ ತರಬೇತಿ ಆಗಬೇಕು. ಇದಕ್ಕಾಗಿ ಸಿದ್ದರಾಮಯ್ಯ 2 ಕೋಟಿ ಅನುದಾನ ನೀಡಿದ್ದಾರೆ. ಈಗಾಗಲೇ 1 ಕೋಟಿಯಲ್ಲಿ ಜಮೀನು ಖರೀಧಿಸಿದ್ದೇವೆ' ಎಂದು ಹೇಳಿದರು.ಪುಣ್ಯಭೂಮಿ ಆವರಣದಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಅನುದಾನ ನೀಡುವಂತೆ ಟ್ರಸ್ಟ್ ವತಿಯಿಂದ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಅವರಿಗೆ ಮನವಿ ಸಲ್ಲಿಸಲಾಯಿತು.

### ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ಕಾರ್ಯಾಚರಣೆ



» **ದಾವಣಗೆರೆ**

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ನಿಯಂತ್ರಣ ಕಾಯ್ದೆಯಡಿ ಪರವಾನಗಿ ಪಡೆಯದೇ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿರುವ ಅಂಗಡಿಗಳ ಮೇಲೆ ದಾಳಿ ನಡೆಸಿ ಪ್ರಕರಣ ದಾಖಲಿಸಲಾಗಿದೆ.

ಸೋಮವಾರ ಮಹಾನಗರ ಪಾಲಿಕೆಯ ತಂಬಾಕು ಮಾರಾಟಗಾರರಿಗೆ ಪ್ರತ್ಯೇಕ ಪರವಾನಗಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ವಲಯ 2 ರ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಂಟಿ ಕಾರ್ಯಾಚರಣೆ ಕೈಗೊಳ್ಳಲಾಯಿತು. ಮಹಾನಗರ ಪಾಲಿಕೆ ವ್ಯಾಪ್ತಿಯ ವಾಣಿಜ್ಯ ಪರವಾನಗಿ ಹೊಂದಿದ ತಂಬಾಕು ಉತ್ಪನ್ನಗಳ ಮಾರಾಟಗಾರರಿಗೆ ಈಗಾಗಗಲೇ ನಿರ್ದಿಷ್ಠ ಸಮಯ ನೀಡಲಾಗಿದೆ.

ಕೆಲವು ಮಾಲೀಕರು ಆಯಾ ವಾರ್ಡ್‌ನ ಆರೋಗ್ಯ ನಿರೀಕ್ಷಕರ ಹತ್ತಿರ ಅರ್ಜಿ ನಮೂನೆಗಳನ್ನು ನೀಡಿದ್ದು, ಅದರಂತೆ ಉಳಿದ ಮಾಲೀಕರು ಪರವಾನಗಿ ಪಡೆಯದೆ ಇರುವುದರಿಂದ ದಾಳಿ ಕೈಗೊಂಡು ದಂಡ ವಿಧಿಸಿ ಪಾಲಿಕೆ ವ್ಯಾಪ್ತಿಯ ಎಲ್ಲಾ ವಾಣಿಜ್ಯ ಪರವಾನಗಿ ಹೊಂದಿದ ತಂಬಾಕು ಮಾರಾಟಗಾರರು ಕಡ್ಡಾಯವಾಗಿ ಪರವಾನಗಿಯನ್ನು ಪಡೆಯುವಂತೆ ತಂಡ ಸೂಚಿಸಿತು. ತಂಡವು ತಂಬಾಕು ಪರವಾನಗಿ ನಿಯಮದಂತೆ 10 ಪ್ರಕರಣಗಳನ್ನು ದಾಖಲಿಸಿ ರೂ.5000 ಹಾಗೂ ಕೋಟ್ಪಾ-2003 ರ ಕಾಯ್ದೆಯಡಿ 4 ಪ್ರಕರಣಗಳನ್ನು ದಾಖಲಿಸಿ ರೂ.600 ಒಟ್ಟು 14 ಪ್ರಕರಣಗಳನ್ನು ದಾಖಲಿಸಿ ರೂ.5600 ದಂಡ ವಿಧಿಸಲಾಯಿತು. ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಕ ರಾಘವೇಂದ್ರ, ಜಿ, ಸಂತೋಷ, ಹರೀಶ್.ಕೆ.ಎನ್, ನಿಖಿಲ್.ಜೆ.ಹೆಚ್, ರಾಮಪ್ಪ, ಮಲ್ಲಿಕಾ ಗುಡೇಕೋಟೆ, ಉಷಾ.ಹೆಚ್ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಸತೀಶ ಕಲಹಾಳ, ದೇವರಾಜ ಕೆ.ಪಿ ಇದ್ದರು.

---

**ಪ್ರಮುಖ ಸುದ್ದಿ**

# ಕಲೆಗೆ ಪ್ರೋತ್ಸಾಹ ಅಗತ್ಯ: ಎಸ್.ಕೆ.ಮಲ್ಲಿಕಾರ್ಜುನ

» **ಚಿತ್ರದುರ್ಗ**





ಕಲಾವಿದರ ಹಾಗೂ ಕಲಾತಂಡಗಳ ಉಳಿವಿಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರಂತರವಾಗಿ ಶ್ರಮಿಸುತ್ತಿದೆ. ಯುವ ಸೌರಭ, ಸಾಂಸ್ಕೃತಿಕ ಸೌರಭ, ಗಿರಿಜನ ಉತ್ಸವ, ಚಿಗುರು, ಜನಪರ ಉತ್ಸವ ಮುಂತಾದ ಕಾರ್ಯಕ್ರಮಗಳನ್ನು ಪ್ರತಿ ವರ್ಷ ನಡೆಸಿ ಉತ್ತೇಜನ ಮತ್ತು ಪ್ರೋತ್ಸಾಹ ನೀಡುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ ತಿಳಿಸಿದರು.

ಚಿತ್ರದುರ್ಗದ ಸೀಬಾರ-ಗುತ್ತಿನಾಡು ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆಯ ಆವರಣದಲ್ಲಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿತ್ರದುರ್ಗ ಹಾಗೂ ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ, ವಿಶ್ವಮಾನವ ಸಂಯುಕ್ತ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ "ಸಾಂಸ್ಕೃತಿಕ ಸೌರಭ -2023" ಕರ್ನಾಟಕ ಸಂಭ್ರಮ-50, ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಧ್ಯೇಯವಾಕ್ಯದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳಲ್ಲಿ ಸುಪ್ತವಾಗಿರುವ ಪ್ರತಿಭೆಗಳನ್ನು ಪ್ರದರ್ಶನ ನೀಡುವ ಮೂಲಕ ಆಸಕ್ತ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯ ನಡೆಸಲಾಗುತ್ತದೆ. ಕಲೆಯನ್ನು ಬಲ್ಲಂತಹ ಪ್ರತಿಭಾನ್ವಿತ ಕಲಾವಿದರು ವಿವಿಧ ಕಲಾ ಪ್ರದರ್ಶಗಳನ್ನು ನೀಡುತ್ತಾರೆ. ಕಣ್ಮರೆಯಾಗುತ್ತಿರುವ ಕಲೆಗಳನ್ನು ಮತ್ತು ಕಲಾತಂಡಗಳ ಬೆಳವಣಿಗೆಗೆ ಪ್ರತಿಯೊಬ್ಬರು ಪ್ರೋತ್ಸಾಹ ನೀಡಬೇಕು ಎಂದರು.

ಕಲಾತಂಡಗಳ ಮೆರವಣಿಗೆಗೆ ಡೊಳ್ಳು ನುಡಿಸುವುದರ ಮೂಲಕ ಚಾಲನೆ ನೀಡಿದ ವಿಶ್ವಮಾನವ ಪ್ರೌಢಶಾಲೆಯ ಮುಖ್ಯಶಿಕ್ಷಕ ಜಿ.ಆರ್.ಚನ್ನಬಸಪ್ಪ ಮಾತನಾಡಿ, ಮಕ್ಕಳಿಗೆ ಓದುವ ಕಡೆಗೆ ಹೆಚ್ಚು ಒತ್ತಡ ನೀಡದೆ ಸಾಂಸ್ಕೃತಿಕವಾಗಿ ನಲಿಕಲಿ ಎಂಬ ಗುರಿಯನ್ನು ಪೋಷಕರು ಬೆಳೆಸಬೇಕಾಗಿದೆ. ಮಾನಸಿಕ ನೆಮ್ಮದಿಯನ್ನು ಮೂಡಿಸುವಲ್ಲಿ ಇಲಾಖೆಯು ಕಾರ್ಯಕ್ರಮಗಳನ್ನು ಹೆಚ್ಚು ಅರ್ಥಪೂರ್ಣವಾಗಿ ನಡೆಸಿಕೊಡುತ್ತಿದೆ ಎಂದು ಇಲಾಖೆ ನಡೆಸಿಕೊಡುತ್ತಿದೆ ಎಂದರು.ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಏಕಾಂತಪ್ಪ ಮತ್ತು ತಂಡದಿಂದ ಸುಗಮ ಸಂಗೀತ, ಶಬೀನಾಬಾನು ಮತ್ತು ತಂಡದವರಿಂದ ಜಾನಪದ ಸಂಗೀತ, ಜಗದೀಶ ಮತ್ತು ತಂಡದವರಿಂದ ಜನಪದ ಗೀತೆಗಳು, ಜಿ.ಕಿರಣ ಮತ್ತು ತಂಡದವರಿಂದ ಸಮೂಹ ನೃತ್ಯ, ತಿಪ್ಪೇಸ್ವಾಮಿ ಮತ್ತು ತಂಡದಿಂದ ಕಿಂದರಜೋಗಿ ಕುಣಿತ, ರಮೇಶ್ ಮತ್ತು ತಂಡದಿಂದ ನಾಸಿಕ್ ಡೋಲು, ಅನಂತಕೃಷ್ಣ ಪಿ ಮತ್ತು ಚಂಪಕ ಶ್ರೀಧರ್ ಅವರಿಂದ ಗಮಕ ಗಾಯನ, ಶಿವಮೂರ್ತಿ ಮತ್ತು ತಂಡದಿಂದ ಡೊಳ್ಳು ಕುಣಿತ ಹಾಗೂ ರಂಗನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ಅವರ ರಚನೆ ಮತ್ತು ನಿರ್ದೇಶನದ ವೈದಾಟ ಎಂಬ ಹಾಸ್ಯ ನಾಟಕ ಪ್ರದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಮಠದಕುರುಬರಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಆರ್.ಗಣೇಶ್, ಸದಸ್ಯರಾದ ಬಿ.ಎನ್.ಶಂಕರಮ್ಮ, ಎನ್. ಕಲ್ಲೇಶಪ್ಪ, ರಾಮಾಂಜನೇಯ, ಹರೀಶ್, ಗಿರೀಶ್, ವಿಶ್ವಮಾನವ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲೆ ಹೆಚ್.ಆರ್.ಸುಧಾ, ಮುಖ್ಯಶಿಕ್ಷಕ ಬಿ.ಜಿ.ಶಿವರುದ್ರಯ್ಯ, ಯೋಗಶಿಕ್ಷಕ ಎಂ.ಬಿ.ಮುರಳಿ, ಬಾದರದಿನ್ನಿ ಆರ್ಟ್ಸ್ ಅಕಾಡೆಮಿಯ ಕಾರ್ಯದರ್ಶಿ ಪ್ರಕಾಶ್ ಬಾದರದಿನ್ನಿ, ಕೆ.ಪಿ.ಎಂ.ಗಣೇಶಯ್ಯ, ಜಿ.ಎನ್.ಶಿವಕುಮಾರ್ ಇದ್ದರು.

ನಮ್ಮ ಜನ
NAMMA JANA



## ಫಾಸ್ಟ್ ನ್ಯೂಸ್

### ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

» ದಾವಣಗೆರೆ

ಚನ್ನಗಿರಿ ತಾಲ್ಲೂಕಿನ ಮತ್ತಿ ಗ್ರಾಮದ ಬಳಿ ತ್ಯಾವಣಿಗೆ ಕಡೆಗೆ ರಸ್ತೆಯ ಮೂಲಕ ನಡೆದುಕೊಂಡು ಹೋಗುತ್ತಿದ್ದ 55 ರಿಂದ 60 ವರ್ಷದ ಅನಾಮಧೇಯ ವ್ಯಕ್ತಿಗೆ ದಾವಣಗೆರೆ ಕಡೆಯಿಂದ ಬರುತ್ತಿದ್ದ ಬೈಕ್ ಸವಾರನೊಬ್ಬ ಡಿಕ್ಕಿಪಡಿಸಿದ ಪರಿಣಾಮ ಅನಾಮಧೇಯ ವ್ಯಕ್ತಿಯ ತಲೆಗೆ, ಕೈಕಾಲುಗಳಿಗೆ ತೀವ್ರ ಪೆಟ್ಟಾಗಿದ್ದು ಕೂಡಲೇ ಸ್ಥಳೀಯರು ನಗರದ ಚಿಗಟೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೇ ಡಿ.9 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಲು ಹದಡಿ ಪೊಲೀಸ್ ಠಾಣೆ ಪೊಲೀಸ್ ಉಪನಿರೀಕ್ಷಕರು ಮನವಿ ಮಾಡಿದ್ದಾರೆ. ಚಹರೆ ವಿವರ; 170.0 ಸೆ.ಮಿ ಎತ್ತರ, ಕೋಲು ಮುಖ, ತೆಳ್ಳನೆಯ ಮೈಕಟ್ಟು ಹಾಗೂ ಗೋಧಿ ಬಣ್ಣ ಹೊಂದಿದ್ದು, ಬಿಳಿ ಮತ್ತು ನೀಲಿ ಬಣ್ಣಗಳ ದಪ್ಪಗೆರೆಗಳಿರುವ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.ಮೃತ ವ್ಯಕ್ತಿಯ ವಾರಸುದಾರರ ಮಾಹಿತಿ ದೊರೆತಲ್ಲಿ ಹದಡಿ ಪೊಲೀಸ್ ಠಾಣೆ ದೂ. ಸಂ- 08192218405 ದಾವಣಗೆರೆ ಕಂಟ್ರೋಲ್ ರೂಂ. ದೂ. ಸಂ-08192-253100ಗೆ ಕರೆಮಾಡಿ ಮಾಹಿತಿ ನೀಡಲು ತಿಳಿಸಲಾಗಿದೆ.

### ಕಾರ್ಯಕ್ರಮ ರದ್ದು

» ದಾವಣಗೆರೆ

ಶಿವಮೊಗ್ಗ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ 1971ರ ಯುದ್ಧದಲ್ಲಿ ಸಕ್ರೀಯವಾಗಿ ಭಾಗವಹಿಸಿದ ಮಾಜಿ ಸೈನಿಕರಿಗೆ ಸನ್ಮಾನಿಸುವ ಮೂಲಕ ವಿಜಯ ದಿವಸವನ್ನು ಆಚರಿಸಲು ಡಿ.16 ರಂದು ಉದ್ದೇಶಿಸಲಾಗಿದ್ದ ಕಾರ್ಯಕ್ರಮವನ್ನು ಕಾರಣಾಂತರಗಳಿಂದ ರದ್ದುಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 08182 220925 ಗೆ ಸಂಪರ್ಕಿಸಿ.

### ತರಕಾರಿ ಮಾರುವ ಮೂಲಕ ಅತಿಥಿ ಉಪನ್ಯಾಸಕರ ಪ್ರತಿಭಟನೆ



» ಚಿತ್ರದುರ್ಗ

ಸೇವೆ ಖಾಯಂಗಾಗಿ ಒತ್ತಾಯಿಸಿ ಕಳೆದ ಹತ್ತೊಂಬತ್ತು ದಿನಗಳಿಂದಲೂ ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಧರಣಿ ನಡೆಸುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅತಿಥಿ ಉಪನ್ಯಾಸಕರುಗಳು ಸೋಮವಾರ ತರಕಾರಿ ಮಾರುವ ಮೂಲಕ ವಿನೂತನವಾಗಿ ಪ್ರತಿಭಟಿಸಿದರು. ಸಸ್ತಾ ಮಾಲ್ ಸೋವಿ ಮಾಲ್ ಎಂದು ರಸ್ತೆಯಲ್ಲಿ ಹೋಗುತ್ತಿದ್ದ ಜನತೆಯನ್ನು ಕೂಗಿ ಕರೆಯುತ್ತಿದ್ದ ಅತಿಥಿ ಉಪನ್ಯಾಸಕರುಗಳು ಅವರೆಕಾಯಿ, ಟೊಮೋಟೋ ಇನ್ನು ಮುಂತಾದ ತರಕಾರಿಗಳನ್ನು ಮಾರಾಟ ಮಾಡುವ ಮೂಲಕ ರಾಜ್ಯ ಸರ್ಕಾರದ ಗಮನ ಸೆಳೆದರು. ಕರ್ನಾಟಕ ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಡಾ.ಯಶೋದರ ಜಿ.ಎನ್. ಮಂಜುನಾಥ ವಿ.ಎಸ್. ಡಾ.ಜಗದೀಶ್, ಡಾ.ಗುರುಸ್ವಾಮಿ, ದಾಕ್ಷಾಯಿಣಿ, ಡಾ.ನಂದಿನಿ, ಮಧು ಹೆಚ್. ಡಾ.ಆಶ, ದಯಾನಂದ, ಡಾ.ರಾಜಣ್ಣ, ಫಿರ್ದೋಸ್, ನಾಗರತ್ನ, ಭಾಗ್ಯಶ್ರೀ, ಚಂದನ ಡಿ.ಎಂ. ಸುವರ್ಣ, ನಿಹಾರಿಕ ಇನ್ನು ಮುಂತಾದವರು ಧರಣಿಯಲ್ಲಿ ಪಾಲ್ಗೊಂಡಿದ್ದರು.

### ಕಾಂಗ್ರೆಸ್ ರಾಜ್ಯಸಭಾ ಸದಸ್ಯ ಧೀರಜ್‌ಸಾಹು ಭ್ರಷ್ಟಾಚಾರ ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ

» ಚಿತ್ರದುರ್ಗ

ಒಡಿಸ್ಸಾದ ಕಾಂಗ್ರೆಸ್ ರಾಜ್ಯಸಭಾ ಸದಸ್ಯ ಧೀರಜ್ ಸಾಹು ಕೋಟ್ಯಾಂತರ ರೂ.ಗಳ ಅಕ್ರಮ ಎಸಗಿರುವುದನ್ನು ಖಂಡಿಸಿ ಭಾರತೀಯ ಜನತಾಪಾರ್ಟಿ ಜಿಲ್ಲಾ ಘಟಕದಿಂದ ಸೋಮವಾರ ಒನಕೆ ಓಬವ್ವ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯ ನೇತೃತ್ವ ವಹಿಸಿದ್ದ ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ ಮಾತನಾಡಿ ಧೀರಜ್‌ಸಾಹು ಬಳಿ ಸಿಕ್ಕಿರುವ ಹಣವನ್ನು ನಲವತ್ತರಿಂದ ಐವತ್ತು ಯಂತ್ರಗಳ ಮೂಲಕ ನೂರ ಐವತ್ತು ಮಂದಿ ಆರು ದಿನಗಳಿಂದ ಎಣಿಸುತ್ತಿದ್ದರೂ ಇನ್ನು ಪೂರ್ತಿಯಾಗಿಲ್ಲ. ಇದುವರೆವಿಗೂ 354 ಕೋಟಿ ರೂ.ಗಳು ಪತ್ತೆಯಾಗಿರುವುದನ್ನು ನೋಡಿದರೆ ಕಾಂಗ್ರೆಸ್ ಲೂಟಿಕೋರ, ಭ್ರಷ್ಠ ಸರ್ಕಾರ ಎನ್ನುವುದು ಗೊತ್ತಾಗುತ್ತದೆ. ಸ್ವತಂತ್ರ ಭಾರತದ ಇತಿಹಾಸದಲ್ಲಿಯೇ ಇಂತಹ ದೊಡ್ಡ ಭ್ರಷ್ಟಾಚಾರ ನಡೆದಿರುವುದನ್ನು ಇದುವರೆವಿಗೂ ದೇಶದ ಜನ ಕಂಡಿರಲಿಲ್ಲ. ಕೂಲಂಕುಶ ತನಿಖೆಯಾಗಬೇಕೆಂದು ಒತ್ತಾಯಿಸಿದರು. ಬಿಜೆಪಿ. ಜಿಲ್ಲಾ ಉಪಾಧ್ಯಕ್ಷ ಸಂಪತ್‌ಕುಮಾರ್, ನಗರಾಧ್ಯಕ್ಷ ನವೀನ್‌ಚಾಲುಕ್ಯ, ಕಲ್ಲೇಶಯ್ಯ ಕೆ. ಮಲ್ಲಿಕಾರ್ಜುನ್, ಗೌರಣ್ಣ, ವೆಂಕಟೇಶ್‌ಯಾದವ್, ಡಿ.ಕೆ. ಜಯಣ್ಣ, ಎಲ್.ವಿ.ಪ್ರಶಾಂತ್, ನಾಗರಾಜ್‌ಬೇದ್ರೆ, ದಗ್ಗೆಶಿವಪ್ರಕಾಶ್ ಪಾಲ್ಗೊಂಡಿದ್ದರು.

# ಮಾನವ ಹಕ್ಕುಗಳ ರಕ್ಷಣೆ ಪ್ರತಿ ನಾಗರಿಕನ ಕರ್ತವ್ಯ

» ದಾವಣಗೆರೆ




ಒಬ್ಬ ವ್ಯಕ್ತಿ ಸಮಾಜದಲ್ಲಿ ಬದುಕಲು ಅತ್ಯವಶ್ಯಕವಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಮಾನವ ಹಕ್ಕುಗಳ ಪಾಲನೆ ಮತ್ತು ರಕ್ಷಣೆ ಮಾಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ. ಮ ಕರೆಣ್ಣವರ ತಿಳಿಸಿದರು.

ಸೋಮವಾರ ಜಿಲ್ಲಾಡಳಿತ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ವತಿಯಿಂದ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ನಡೆದ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವ ಸಂಸ್ಥೆ ನೀಡಿರುವ ಎಲ್ಲರಿಗೂ ಸ್ವಾತಂತ್ರ್ಯ ಸಮಾನತೆ ಮತ್ತು ನ್ಯಾಯ ಎಂಬ ಘೋಷವಾಕ್ಯದೊಂದಿಗೆ ಇಂದು 75ನೇ ಮಾನವ ಹಕ್ಕುಗಳ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಎರಡನೇ ಮಹಾಯುದ್ಧದ ನಂತರವೂ ರಾಷ್ಟ್ರ ರಾಷ್ಟ್ರಗಳ ಮಧ್ಯೆ ಯುದ್ಧ, ಮಾನವ ಹಕ್ಕುಗಳ ಉಲ್ಲಂಘನೆ ಹಾಗೂ ಮಾನವರನ್ನು ಪಶುಗಳಂತೆ ದುಡಿಸಿಕೊಳ್ಳುವ ಪರಿಸ್ಥಿತಿಯಿತ್ತು, ಇದನ್ನು ಮನಗಂಡ ವಿಶ್ವ ಸಂಸ್ಥೆ ಪ್ಯಾರೀಸ್ ಅಧಿವೇಶನದಲ್ಲಿ ಮಾನವ ಹಕ್ಕು ಎಂಬ ಪರಿಕಲ್ಪನೆ ಕುರಿತು ಚರ್ಚಿಸಿ, 1948 ಡಿಸೆಂಬರ್ 10 ರಂದು ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾನವ ಹಕ್ಕುಗಳನ್ನು ಸಾರ್ವತ್ರಿಕವಾಗಿ ಘೋಷಿಸಿತು. ಅಂದಿನಿಂದ ಪ್ರತಿಯೊಬ್ಬ ವ್ಯಕ್ತಿಯೂ ಸಮಾಜದಲ್ಲಿ ಘನತೆಯಿಂದ ಜೀವಿಸಲು ಅರ್ಹತೆ ಹೊಂದಿದ್ದು, ಮೂಲಭೂತ ಹಕ್ಕುಗಳ ಉಲ್ಲಂಘನೆಯಾದಲ್ಲಿ ಪ್ರತಿಯೊಬ್ಬ ನಾಗರೀಕನು ಶೋಷಿತರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೈಜೋಡಿಸಬೇಕು ಎಂದರು. ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಮಾತನಾಡಿ ಮನುಷ್ಯ ಅರ್ಥಪೂರ್ಣ ಹಾಗೂ ತೃಪ್ತಿದಾಯಕ ಜೀವನವನ್ನು ನಿರ್ಭೀತಿಯಿಂದ ನಡೆಸಲು ಮಾನವ ಹಕ್ಕುಗಳು ಅತ್ಯವಶ್ಯಕವಾಗಿವೆ. ಮಾನವ ಹಕ್ಕುಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಅಲೆಕ್ಸಾಂಡರ್ ಕಾಲದಿಂದಲೂ ಮನುಷ್ಯ ಭಯ, ಭೀತಿಯಿಂದ ಬದುಕುವ ಸಂದರ್ಭಗಳನ್ನು ಇತಿಹಾಸದ ಪುಟಗಳಲ್ಲಿ ಕಾಣಬಹುದು. ನಾಗರಿಕತೆಗಳ ಕಾಲದಿಂದಲೂ ಒಂದಲ್ಲ ಒಂದು ರೀತಿಯಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತಿದ್ದು, 1948 ರಿಂದ ಇಲ್ಲಿಯವರೆಗೆ ಸಂವಿಧಾನಿಕ ರಕ್ಷಣೆಯನ್ನು ಮಾನವ ಹಕ್ಕುಗಳಿಗೆ ನೀಡಲಾಗಿದೆ.

ಮಾನವ ಹಕ್ಕುಗಳಲ್ಲಿ ಸಾಮಾಜಿಕ, ರಾಜಕೀಯ, ಆರ್ಥಿಕ ಹಾಗೂ ಸಾಂಸ್ಕೃತಿಕವಾಗಿ ಮನುಷ್ಯ ತನ್ನನ್ನು ತಾನು ತೊಡಗಿಸಿಕೊಳ್ಳಲು ಸಂಪೂರ್ಣ ಅವಕಾಶ ನೀಡಲಾಗಿದೆ. ಮಾನವ ಹಕ್ಕುಗಳ ಉಲ್ಲಂಘನೆ ಕಂಡುಬಂದರೆ ಅವರಿಗೆ ನ್ಯಾಯ ಒದಗಿಸಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಮಾನವ ಹಕ್ಕುಗಳ ಸಂರಕ್ಷಣೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಉಪ ವಿಭಾಗಾಧಿಕಾರಿ ದುರ್ಗಾಶ್ರೀ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅರುಣ್ ಕುಮಾರ್ ಎಲ್.ಹೆಚ್, ಕಾನೂನು ಸಲಹೆಗಾರರಾದ ಹಾಲಪ್ಪ ಉಪಸ್ಥಿತರಿದ್ದರು.

# ಭಾರತೀಯ ಪರಂಪರೆಯಲ್ಲಿ ಗುರುವಿನ ಸ್ಥಾನಕ್ಕೆ ವಿಶೇಷ ಮಾನ್ಯತೆ ಇದೆ: ಆರ್.ಮುರುಗೇಂದ್ರಪ್ಪ

» ಚಳ್ಳಕೆರೆ



ಗುರುಕುಲ ಪದ್ದತಿ ಮೂಲಕ ಶಿಕ್ಷಣ ನೀಡುವ ಪದ್ದತಿ ನಮ್ಮಲ್ಲಿ ಆರಂಭವಾಯಿತು. ಇಂದು ಆಧುನಿಕತೆಯಲ್ಲಿ ನಮಗೆ ಶಿಕ್ಷಣ ದೊರೆಯುತ್ತಿದೆ. ಆನ್‌ಲೈನ್ ಶಿಕ್ಷಣದ ಮೂಲಕ ವಿದ್ಯಾರ್ಥಿಗಳ ಬುದ್ಧಿಕೌಶಲ್ಯವನ್ನು ಹೆಚ್ಚಿಸುವ ಕಾರ್ಯ ನಡೆಯುತ್ತಿದೆ. ಆದರೆ, ಭಾರತೀಯ ಸಂಸ್ಕೃತಿಯಲ್ಲಿ ಗುರುವಿನ ಸ್ಥಾನಕ್ಕೆ ವಿಶೇಷ ಗೌರವವಿದೆಎಂದು ನಿವೃತ್ತ ಡಯಟ್ ಉಪನ್ಯಾಸಕ ಆರ್. ಮುರುಗೇಂದ್ರಪ್ಪ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕಿನ ಸಿದ್ದೇಶ್ವರದುರ್ಗ ಗ್ರಾಮದ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ 2007-08ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಳೇ ವಿದ್ಯಾರ್ಥಿಗಳ ಸ್ನೇಹ ಮಿಲನ ಹಾಗೂ ಗುರುವಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಪ್ರೌಢಶಾಲೆಗಳಲ್ಲಿ ಈ ಶಾಲೆಗೆ ವಿಶೇಷವಾದ ಸ್ಥಾನಮಾನವಿದೆ. ಈ ಶಾಲೆಯಲ್ಲಿ ವಿದ್ಯೆ ಕಲಿತ ಸಾವಿರಾರು ವಿದ್ಯಾರ್ಥಿಗಳು ಇಂದು ಉತ್ತಮ ಬದುಕು ರೂಪಿಸಿಕೊಂಡಿದ್ದಾರೆ. ಅಂದು ನಾವು ನೀಡಿದ ಶಿಕ್ಷಣ ಇಂದು ವಿದ್ಯಾರ್ಥಿಗಳಿಗೆ ವರವಾಗಿ ಪರಿಣಮಿಸಿದ್ದು ಸಂತಸ ತಂದಿದೆ. ಆದರೂ ವಿದ್ಯಾರ್ಥಿಗಳೆಲ್ಲರೂ ಸೇರಿ ಸ್ನೇಹ ಮಿಲನದ ಹೆಸರಿನಲ್ಲಿ ನಮ್ಮನ್ನು ಸನ್ಮಾನಿಸುವ ಮೂಲಕ ಗುರುಗಳಲ್ಲಿ ಅವರಿಗೆ ಇರುವ ಭಕ್ತಿ ಶ್ರದ್ದೆಯನ್ನು ವ್ಯಕ್ತಪಡಿಸಿರುವುದು ಎಂದೂ ಮರೆಯಲಾಗದು ಎಂದರು.ಉಪ ಪ್ರಾಚಾರ್ಯ ಎಚ್.ನಾಗೇಂದ್ರಪ್ಪ, ಉಪನ್ಯಾಸಕ ಎಸ್.ಆರ್.ನಯನಮೂರ್ತಿ, ಹಳೇ ವಿದ್ಯಾರ್ಥಿಗಳಾದ ಪ್ರತಾಪ್, ತಾರೇಶ, ದುಶ್ಯಂತ್, ರಾಜು, ಮಂಜುಳಾ, ಮಹಂತೇಶ ವೈ.ಲಕ್ಷ್ಮೀ, ಅನಿಲ್‌ಕುಮಾರ್, ವಿಶ್ವನಾಥ ಹಳೇ ನೆನಪುಗಳನ್ನು ಮೆಲುಕು ಹಾಕಿದರು. ಕಾರ್ಯಕ್ರಮದ ಅಧ್ಯಕ್ಷತೆಯ್ನು ಪ್ರೌಢಶಾಲಾ ಮುಖ್ಯ ಶಿಕ್ಷಕಿ ಆರ್.ಮಂಜುಳಾ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗುರುಗಳಾದ ಆರ್.ಸುರೇಶ, ತಾರಾಕುಮಾರಿ, ವಿ.ವಿಜಯಲಕ್ಷ್ಮೀ, ಲಕ್ಷ್ಮೀ, ಗ್ರಾಮದ ಹಳೇ ವಿದ್ಯಾರ್ಥಿಗಳಾದ ಪ್ರತಾಪ್, ಮಧುಸೂಧನ, ವಿಶ್ವ, ಮಂಜುಳಾ, ಮಹಂತೇಶ ವೈ. ಲಕ್ಷ್ಮೀ, ಶ್ರೀನಿವಾಸ, ತಾರೇಶ, ರಾಜು, ಗ್ರಾಮಸ್ಥರಾದ ಚಿಕ್ಕಣ್ಣ, ರಾಜಣ್ಣ, ಮಂಜುನಾಥ, ರಾಘವೇಂದ್ರ ಮುಂತಾದವರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಕಂಚಿನ ಪದಕ



» ಚಿತ್ರದುರ್ಗ

ಮಹಾರಾಷ್ಟ್ರದ ಪಾಲೆಗಾರ್‌ನಲ್ಲಿ ಈಚೆಗೆ ನಡೆದ 25ನೇ ರಾಷ್ಟ್ರೀಯ ಸಬ್ ಜೂನಿಯರ್ ನ್ಯಾಷನಲ್ ಟಗ್ ಆಫ್ ವಾರ್ ಚಾಂಪಿಯನ್‌ಷಿಪ್‌ನಲ್ಲಿ ಚಿತ್ರದುರ್ಗ ತಾಲ್ಲೂಕಿನ ಗೂಳಯ್ಯನಹಟ್ಟಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿಗಳು ಮಹಾರಾಷ್ಟ್ರ ತಂಡವನ್ನು ಮಣಿಸುವುದರ ಮೂಲಕ ಕಂಚಿನ ಪದಕ ಪಡೆದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಗೂಳಯ್ಯನಹಟ್ಟಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಎನ್. ಮಂಜುನಾಥರೆಡ್ಡಿ, ದೈಹಿಕ ಶಿಕ್ಷಣ ಶಿಕ್ಷಕ ಚಿನ್ನಯ್ಯ ಮತ್ತು ವಸತಿ ಶಾಲೆಯ ಎಲ್ಲಾ ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

## ಹದಡಿ ಕ್ರಾಸ್ ಸೇತುವೆ ಹತ್ತಿರ ಬಸ್ ಅಪಘಾತ, ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದ ಡಿಸಿ



» ದಾವಣಗೆರೆ

ಚಿಕ್ಕಬಳ್ಳಾಪುರ, ಚಿಂತಾಮಣಿಯಿಂದ ದಲಿತ ಮುಖಂಡರು ಬೆಳಗಾವಿ ಅಧಿವೇಶನಕ್ಕೆ ತೆರಳಲಿ ಮನವಿ ಸಲ್ಲಿಸಲು ಸೋಮವಾರ ದಾವಣಗೆರೆ ಸಮೀಪ ತೆರಳುವಾಗ ಬಸ್ ಅಪಘಾತವಾಗಿ ಕೆಲವರು ಗಾಯಾಳುಗಳಾಗಿದ್ದಾರೆ. ಗಾಯಾಳುಗಳನ್ನು ಸಿಜೆ ಹಾಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಸೋಮವಾರ ಆಸ್ಪತ್ರೆಗೆ ಭೇಟಿ ನೀಡಿ ಇವರ ಯೋಗಕ್ಷೇಮವನ್ನು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ವಿಚಾರಿಸಿದರು. ಸೋಮವಾರ ಬೆಳಗಿನ ಜಾವ 3.25 ರ ಸುಮಾರಿಗೆ ಹದಡಿ ಕ್ರಾಸ್ ಸೇತುವೆ ಬಳಿ, ಜಿಲ್ಲಾ ಪಂಚಾಯತ್ ಕಚೇರಿ ಹತ್ತಿರ ಬಸ್ ಅಪಘಾತವಾಗಿ ಸುಮಾರು 18 ಜನರು ಗಾಯಾಳುಗಳಾಗಿದ್ದಾರೆ. ಇವರು ಚಿಂತಾಮಣಿ, ಚಿಕ್ಕಬಳ್ಳಾಪುರ, ಗೌರಿಬಿದನೂರು ನಿವಾಸಿಗಳಾಗಿದ್ದಾರೆ.

## ಕಾಟಪ್ಪನಹಟ್ಟಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಮಾರ್ಟ್‌ಕ್ಲಾಸ್ ಉದ್ಘಾಟನೆ

» ಚಳ್ಳಕೆರೆ



ಶಿಕ್ಷಣ ಇಲಾಖೆ ಅನೇಕ ವಿನೂತನ ಯೋಜನೆಗಳ ಮೂಲಕ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಮುಂದಾಗಿದೆ. ವಿಶೇಷವಾಗಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಆನ್‌ಲೈನ್ ತರಗತಿಗಳ ಮೂಲಕ ಗುಣಾತ್ಮಕ ಶಿಕ್ಷಣವನ್ನು ನೀಡಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಸೋಮವಾರ ಕಾಟಪ್ಪನಹಟ್ಟಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಮಾರ್ಟ್‌ಕ್ಲಾಸ್ ಪ್ರೋಜೆಕ್ಟರ್ ಮತ್ತು ಸ್ಕ್ರೀನ್‌ನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಸ್ಮಾರ್ಟ್‌ಕ್ಲಾಸ್ ಮೂಲಕ ಪರಿಪಕ್ವವಾದ ವಿಚಾರಗಳನ್ನು ತಿಳಿದುಕೊಳ್ಳುವ ಜೊತೆಗೆ ನೇರವಾಗಿ ನೋಡಿ ಹೆಚ್ಚು ಜ್ಞಾನ ಪಡೆಯುವ ಕಾರ್ಯವನ್ನು ಈ ಮೂಲಕ ಮಾಡಲಾಗಿದೆ. ಇದರ ಸದುಪಯೋಗ ಎಲ್ಲರೂ ಪಡೆಯಲು ಮುಂದಾಗಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮುಖ್ಯ ಶಿಕ್ಷಕಿ ಸುಲೋಚನ, ವಿದ್ಯಾರ್ಥಿಗಳಿಗೆ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಸ್ಮಾರ್ಟ್‌ಕ್ಲಾಸ್‌ಹೆಚ್ಚು ಉಪಯುಕ್ತವಾಗಿದೆ. ನಮ್ಮ ಶಾಲೆಯಲ್ಲಿ ಸ್ಮಾರ್ಟ್‌ಕ್ಲಾಸ್ ಆರಂಭಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಹಕಾರ ಮುಖ್ಯವಾಗಿದೆ. ವಿದ್ಯಾರ್ಥಿಗಳ ಶಿಕ್ಷಣದ ವಿಚಾರದಲ್ಲಿ ಎಂದೂ ಅವರು ಚಿಂತನೆ ಮಾಡದೆ ಸದಾ ಎಲ್ಲಾ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ದೊರೆಯುವ ನಿಟ್ಟಿನಲ್ಲಿ ಉತ್ತಮ ಮಾರ್ಗದರ್ಶನ ಮಾಡಿದ್ದಾರೆ. ವಿದ್ಯಾರ್ಥಿಗಳು ಶಾಲೆಗೆ ಗೈರುಹಾಜರಾಗದೆ ಜಾಗ್ರತೆ ವಹಿಸಿ ಶಿಕ್ಷಣ ಪಡೆಯಬೇಕೆಂದು ಮನವಿ ಮಾಡಿದರು.

## ಪ್ರಮುಖ ಸುದ್ದಿ

# ಜೀವನ್ಮರಣ ವ್ಯಕ್ತಿಗೆ ರಕ್ತ ನೀಡುವ ಶ್ರೇಷ್ಠ ಕಾರ್ಯಕ್ಕೆ ವಕೀಲರ ಸಂಘ ಮುಂದಾಗಿರುವುದು ಸಂತಸ: ನ್ಯಾ. ಗೌಡಜಗದೀಶರುದ್ರೆ

» ಚಳ್ಳಕೆರೆ



ರಕ್ತದಾನ ಶಿಬಿರ ವ್ಯಕ್ತಿಯ ಜೀವ ಉಳಿಸುವುದಲ್ಲದೆ, ಸಮಾಜಕ್ಕೂ ಉತ್ತಮ ಸಂದೇಶ ನೀಡಿದಂತಾಗುತ್ತದೆ ಎಂದು ಜೆಎಂಎಫ್‌ಸಿ ನ್ಯಾಯಾಧೀಶ ಗೌಡಜಗದೀಶ್‌ರುದ್ರೆ ತಿಳಿಸಿದರು.

ಅವರು, ವಕೀಲರ ಸಂಘದ ಕಾರ್ಯಾಲಯದಲ್ಲಿ ನಗರದ ಎಚ್‌ಡಿಎಫ್‌ಸಿ ಬ್ಯಾಂಕ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ರಕ್ತದಾನ ಶಿಬಿರವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂತಹ ಸಾಮಾಜಿಕ ಕಳಕಳಿಯುಳ್ಳ ಕಾರ್ಯಕ್ರಮಗಳನ್ನು ವಕೀಲರ ಸಂಘ ನಿರಂತರವಾಗಿ ಹಮ್ಮಿಕೊಳ್ಳುವ ಮೂಲಕ ಜನರಲ್ಲಿ ಆತ್ಮವಿಶ್ವಾಸ ಮೂಡಿಸಲಿ ಎಂದು ಹೇಳಿದರು.

ಎಚ್‌ಡಿಎಫ್‌ಸಿ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ಅರುಣ್ ಮಾತನಾಡಿ, ಪ್ರತಿವರ್ಷ ನಮ್ಮ ಬ್ಯಾಂಕ್ ವತಿಯಿಂದ ಇಂತಹ ಕಾರ್ಯಕ್ರಮ ಹಮ್ಮಿಕೊಂಡು ಜನರಿಗೆ ನೆರವಾಗುವುದಲ್ಲದೆ, ಅವರ ಆರೋಗ್ಯ ವೃದ್ಧಿಗೂ ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ. ಬ್ಯಾಂಕ್ ಎಂದರೆ ಕೇವಲ ವ್ಯವಹಾರ ನಡೆಸುವುದಲ್ಲದೆ, ಸಾರ್ವಜನಿಕರ ಸ್ಪಂದನೆಗೂ ನಾವು ನೆರವಾಗುವ ದೃಷ್ಠಿಯಿಂದ ಈ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಎಚ್‌ಡಿಎಫ್‌ಸಿ ಬ್ಯಾಂಕ್ ವತಿಯಿಂದ ರಕ್ತದಾನ ಶಿಬಿರವನ್ನು ಹಮ್ಮಿಕೊಂಡಿರುವುದು ಸಮಯೋಚಿತ ಹಾಗೂ ಸಂತಸವಾಗಿದೆ. ಜೀವನ್ಮರಣ ಹೋರಾಟ ನಡೆಸುವ ವ್ಯಕ್ತಿಗಳಿಗೆ ಮತ್ತೊಮ್ಮೆ ಮರುಜೀವ ಕಲ್ಪಿಸುವ ಶಕ್ತಿ ರಕ್ತದಲ್ಲಿದೆ. ಎಲ್ಲಾ ದಾನಗಳಲ್ಲೂ ಶ್ರೇಷ್ಠವಾದ ದಾನ ರಕ್ತದಾನವೆಂದು ನಮ್ಮ ಹಿರಿಯರು ಹೇಳಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಪಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಮಾಜಿ ಅಧ್ಯಕ್ಷ ಜಿ.ಎಂ.ಆನಂದಪ್ಪ, ಹಿರಿಯ ವಕೀಲರ ದೊಡ್ಡರಂಗಪ್ಪ, ಜಡೇಕುಂಟೆಕುಮಾರ್, ಗೋಪಿನಾಥ, ಧನಂಜಯ, ರಾಮಕೃಷ್ಣ, ಎಂ.ಎಸ್.ಜಗದೀಶ್‌ನಾಯಕ, ಜಿ.ಕೆ.ಪವಿತ್ರ, ಬಿ.ಎಂ.ರಾಜೇಶ್ವರಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಕೀಲ ಹತ್ಯೆ: ವಕೀಲರ ಸಂಘದ ತಾಲ್ಲೂಕು ಘಟಕದಿಂದ ಪ್ರತಿಭಟನೆ



» **ಹಿರಿಯೂರು**

ರಾಜ್ಯದಲ್ಲಿ ವಕೀಲರ ಮೇಲೆ ಪದೇ ಪದೇ ಹಲ್ಲೆಗಳು ನಡೆಯುತ್ತಲೇ ಇದ್ದು, ಕಲಬುರ್ಗಿಯಲ್ಲಿ ಹಾಡುಹಗಲೇ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಈರಣ್ಣ ಮಾಳಿ ಪಟೇಲ್ ಅವರನ್ನು ನಡುರಸ್ತೆಯಲ್ಲಿಯೇ ಹತ್ಯೆ ಮಾಡಿರುವುದು ನಿಜಕ್ಕೂ ಖಂಡನೀಯ ಎಂಬುದಾಗಿ ವಕೀಲರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷರಾದ ಆರ್.ಪಿ.ರಾಮಚಂದ್ರಪ್ಪ ಆಗ್ರಹಿಸಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಕಲಬುರ್ಗಿಯಲ್ಲಿ ಈಚೆಗೆ ನಡೆದ ವಕೀಲ ಈರಣ್ಣ ಮಾಳಿ ಪಟೇಲ್ ರವರ ಹತ್ಯೆಯನ್ನು ಖಂಡಿಸಿ ವಕೀಲರ ಸಂಘದ ತಾಲ್ಲೂಕು ಘಟಕದ ನೇತೃತ್ವದಲ್ಲಿ ನಗರದಲ್ಲಿ ಪ್ರತಿಭಟನೆ ನಡೆಸಿ, ತಾಲ್ಲೂಕು ತಹಶೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿಪತ್ರ ಅರ್ಪಿಸಿ, ನಂತರ ಅವರು ಮಾತನಾಡಿದರು.ಚಿಕ್ಕಮಗಳೂರು ಒಳಗೊಂಡಂತೆ ಹಲವು ಕಡೆಗಳಲ್ಲಿ ವಕೀಲರ ಮೇಲೆ ಹಲ್ಲೆಗಳು ನಡೆಯುತ್ತಲೇ ಇದ್ದು,. ತಪ್ಪಿತಸ್ಥರನ್ನು ತಕ್ಷಣ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು, ಇಲ್ಲವಾದಲ್ಲಿ ಹೋರಾಟವನ್ನು ತೀವ್ರಗೊಳಿಸಬೇಕಾಗುತ್ತದ ಎಂಬುದಾಗಿ ಎಚ್ಚರಿಕೆ ನೀಡಿದರು. ಈ ಪ್ರತಿಭಟನೆಯಲ್ಲಿ ವಕೀಲರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಆರ್.ಪಿ.ರಾಮಚಂದ್ರಪ್ಪ, ಪ್ರಧಾನ ಕಾರ್ಯದರ್ಶಿ ಚಿತ್ರಲಿಂಗಪ್ಪ, ಉಪಾಧ್ಯಕ್ಷೆ ಎಚ್.ಬೀನಾರಾಣಿ,ವಕೀಲರಾದಪಾಂಡುರಂಗಯ್ಯ, ಜಿ.ಎಸ್.ತಿಪ್ಪೇಸ್ವಾಮಿ, ವೆಂಕಟೇಶ್, ಸೈಯದ್ ನವಾಜ್, ಅನಿಲ್ ಕುಮಾರ್, ಕಲಾವತಿ, ಈರಣ್ಣ, ರಾಘವೇಂದ್ರ, ಮೋಹನ್ ಕುಮಾರ್, ಕಾಂತರಾಜ್ ಪಾಲ್ಗೊಂಡಿದ್ದರು.

### ವಿಶ್ವ ಮಾನವ ಹಕ್ಕುಗಳ ದಿನಾಚರಣೆ




» **ಹಿರಿಯೂರು**

ಎರಡನೇ ಮಹಾಯುದ್ಧದಲ್ಲಾದ ಸಾವು–ನೋವುಗಳ ಪರಿಣಾಮವನ್ನು ನೋಡಿದ ನಂತರ ಎಲ್ಲಾ ರಾಷ್ಟ್ರಗಳು ಮಾನವ ಹಕ್ಕುಗಳ ಪರಿರಕ್ಷಣೆಯ ಅಗತ್ಯತೆಯನ್ನು ಮನಗಂಡವು ಎಂಬುದಾಗಿ ರಾಷ್ಟ್ರೀಯ ಮಾನವ ಹಕ್ಕುಗಳ ಮಾಹಿತಿ ಸಮಿತಿಯ ರಾಜ್ಯ ಕಾರ್ಯಾಧ್ಯಕ್ಷರಾದ ವಿ.ಎಂ.ನಾಗೇಶ್ ಹೇಳಿದರು.ರಾಷ್ಟ್ರೀಯ ಮಾನವ ಹಕ್ಕುಗಳ ಮಾಹಿತಿ ಸಮಿತಿಯ ತಾಲ್ಲೂಕು ಘಟಕ ವಿಶ್ವಮಾನವ ಹಕ್ಕುಗಳ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಪ್ರಜಾಪ್ರಭುತ್ವದಲ್ಲಿ ಜಾತಿ, ಧರ್ಮ, ಪ್ರಾಂತಗಳ ಭೇದಭಾವ ಇಲ್ಲದೆ ಎಲ್ಲಾ ನಾಗರೀಕರ ಸಮಾನತೆಯ ಇನ್ನೊಂದು ಮುಖವೇ ಮಾನವ ಹಕ್ಕುಗಳ ಪರಿರಕ್ಷಣೆಯಾಗಿದೆ, ಈ ನಿಟ್ಟಿನಲ್ಲಿ ಪ್ರತಿಯೊಂದು ರಾಷ್ಟ್ರಗಳು ಮಾನವ ಹಕ್ಕುಗಳ ರಕ್ಷಣೆಗೆ ಮುಂದಾಗಿವೆ ಎಂಬುದಾಗಿ ಹೇಳಿದರು.ರಾಷ್ಟ್ರೀಯ ಮಾನವ ಹಕ್ಕುಗಳ ಮಾಹಿತಿ ಸಮಿತಿಯ ತಾಲ್ಲೂಕು ಘಟಕದ ಅಧ್ಯಕ್ಷರಾದ ಸಿ.ದೀಪಕ್ ಮಾತನಾಡಿ, ತಾಲ್ಲೂಕು ಘಟಕದ ಚಟುವಟಿಕೆಗಳನ್ನು ಪರಿಗಣನೆಯ ಆಧಾರದ ಮೇಲೆ ತಾಲ್ಲೂಕು ಘಟಕ ರಾಜ್ಯದಲ್ಲಿ ತೃತೀಯ ಸ್ಥಾನಮಾನ ಪಡೆದಿದೆ ಎಂಬುದಾಗಿ ಹೇಳಿದರು. ಇದೇ ಸಂದರ್ಭದಲ್ಲಿ ಸ್ಥಾನಮಾನ ಘೋಷಿಸಿದ ರಾಜ್ಯ ಘಟಕದ ಅಧ್ಯಕ್ಷರಾದ ರಘುಕುಮಾರ್ ಹಾಗು ಜಿಲ್ಲಾ ಘಟಕದ ಅಧ್ಯಕ್ಷರಾದ ನಾಗರಾಜ್ ರವರಿಗೆ ಸಭೆಯಲ್ಲಿ ಧನ್ಯವಾದಗಳನ್ನು ತಿಳಿಸಲಾಯಿತು

ಈ ವೇದಿಕೆಯಲ್ಲಿ ನಗರಸಭೆ ಸದಸ್ಯರಾದ ಶ್ರೀಮತಿ ಮಮತ, ತಾಲೂಕು ಘಟಕದ ಪದಾಧಿಕಾರಿಗಳಾದ ವೇಲುಸ್ವಾಮಿ ನಾಯಿಡು ಹಾಗೂ ಪ್ರಭಾಕರ್ ರೆಡ್ಡಿ ಉಪಸ್ಥಿತರಿದ್ದರು.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**



ಜಲಸಿರಿ ಕಾಮಗಾರಿಯ ತುರ್ತು ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಡಿ.12 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಸಿ.ಜಿ.ಹೆಚ್. ಫೀಡರ್ ವ್ಯಾಪ್ತಿಯಲ್ಲಿ ಪಿ.ಜೆ. ಬಡಾವಣೆ ಪೊಲೀಸ್ ಕ್ವಾಟ್ರಸ್, ವಿನೋಬನಗರ 1ನೇ ಮುಖ್ಯ ರಸ್ತೆ ಜೊಳ್ಳಿ ಕಾಂಪೌಂಡ್ ರಾಮಕೃಷ್ಣ ಹಾಸ್ಪಿಟಲ್, ಬಿಎಸ್‌ಎನ್‌ಎಲ್ ಕ್ವಾಟ್ರಸ್, ಹಾಗೂ ಸುತ್ತ ಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

# ಕೇಂದ್ರದ ವೈಫಲ್ಯ ಮುಚ್ಚಿಹಾಕಲು ಬಿಜೆಪಿ ಅಡ್ಡಿ

» **ಬೆಳಗಾವಿ**



ತಮ್ಮ ಪಕ್ಷದೊಳಗಿನ ಒಳಜಗಳ ಮತ್ತು ಬರಗಾಲ ಪರಿಹಾರಕ್ಕೆ ಹಣ ನೀಡದ ಕೇಂದ್ರ ಸರ್ಕಾರದ ವೈಫಲ್ಯವನ್ನು ಮುಚ್ಚಿಹಾಕಿ ಜನರ ಗಮನ ಬೇರೆ ಕಡೆ ಸೆಳೆಯುವ ದುರುದ್ದೇಶದಿಂದ ರಾಜ್ಯದ ಬಿಜೆಪಿ ಶಾಸಕರು ವಿಧಾನಸಭೆಯಲ್ಲಿ ಧರಣಿ ನಡೆಸಿ ಕಲಾಪಕ್ಕೆ ತಡೆಯೊಡ್ಡುತ್ತಿದ್ದಾರೆ. ಇವರಿಗೆ ರಾಜ್ಯದ ಜನರ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ, ಜನತೆ ರಾಜಕೀಯ ಪಕ್ಷಗಳು ಮತ್ತು ರಾಜಕೀಯ ನಾಯಕರಿಗೆ ಜನತೆ ಛೀಮಾರಿ ಹಾಕುತ್ತಿರುವುದಕ್ಕೆ ಚುನಾಯಿತ ಪ್ರತಿನಿಧಿಗಳ ಇಂತಹ ಬೇಜವಾಬ್ದಾರಿ ನಡವಳಿಕೆಗಳೇ ಕಾರಣ.

ಜನರ ತೆರಿಗೆ ಹಣದಿಂದ ಬೆಳಗಾವಿಯಲ್ಲಿ ಸುವರ್ಣ ಸೌಧ ನಿರ್ಮಿಸಿ ವರ್ಷಕ್ಕೊಂದು ಬಾರಿ ವಿಧಾನಮಂಡಲದ ಅಧಿವೇಶನ ನಡೆಸುತ್ತಿರುವುದರ ಮುಖ್ಯ ಉದ್ದೇಶವೇ ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳುವುದಾಗಿದೆ. ಇಂತಹ ಚರ್ಚೆಗೆ ಅವಕಾಶವನ್ನೇ ಕೊಡದೆ ಇರುವ ರಾಜ್ಯದ ಬಿಜೆಪಿ ಶಾಸಕರು ತಾವು ಉತ್ತರ ಕರ್ನಾಟಕದ ವಿರೋಧಿಗಳು ಎನ್ನುವುದನ್ನು ಸಾಬೀತು ಪಡಿಸಿದ್ದಾರೆ.

ರಾಜ್ಯದಲ್ಲಿ ತೀವ್ರ ಬರಗಾಲ ಇದೆ. ರಾಜ್ಯ ಸರ್ಕಾರ ಶಕ್ತಿ ಮೀರಿ ಪರಿಹಾರ ಕಾರ್ಯವನ್ನು ನಡೆಸುತ್ತಿದೆ. ರಾಜ್ಯದ 223 ತಾಲ್ಲೂಕುಗಳಲ್ಲಿ ಬರಪರಿಸ್ಥಿತಿ ಇದೆ. ಬರಪರಿಹಾರಕ್ಕಾಗಿ. ರೂ.18,171 ಕೋಟಿ ನೆರವನ್ನು ಕೇಂದ್ರ ಸರ್ಕಾರದಿಂದ ಕೇಳಿದ್ದೇವೆ. 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟ ಆಗಿದೆ. ಈ ನಷ್ಟಕ್ಕೆ ಪರಿಹಾರ ನೀಡಲು ರೂ.4,663 ಕೋಟಿ ಕೇಳಿದ್ದೇವೆ. ಸೆಪ್ಟಂಬರ್ 21 ರಂದು ಬರಪರಿಹಾರಕ್ಕಾಗಿ ಕೇಂದ್ರಕ್ಕೆ ಮೊದಲ ಮನವಿ ಮಾಡಿದ್ದೆವು. ಕೇಂದ್ರದ ತಂಡ ಬಂದು ಸಮೀಕ್ಷೆ ನಡೆಸಿ, ವರದಿಯನ್ನೂ ಕೂಡಾ ನೀಡಿದೆ. ರಾಜ್ಯ ಸರ್ಕಾರದ ಮನವಿಗೆ ಇಲ್ಲಿಯ ವರೆಗೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ. ನಾವು ಬರೆದ ಪತ್ರಗಳಿಗೆ ಪ್ರತಿಕ್ರಿಯೆ ಇಲ್ಲ. ಪ್ರಧಾನಮಂತ್ರಿಯವರನ್ನು ಭೇಟಿ ಮಾಡಲು ಅವಕಾಶ ಕೇಳಿದರೂ ಕೊಟ್ಟಿಲ್ಲ. ಡಬಲ್ ಎಂಜಿನ ಸರ್ಕಾರ ಬಂದರೆ ರಾಜ್ಯದಲ್ಲಿ ಹಾಲು–ತುಪ್ಪದ ಹೊಳೆ ಹರಿಯುತ್ತದೆ ಎಂಬ ಬಿಜೆಪಿ ನಾಯಕರ ಹಸಿ ಸುಳ್ಳುಗಳನ್ನು ನಂಬಿ ಕನ್ನಡಿಗರು 25 ಮಂದಿ ಬಿಜೆಪಿ ಸದಸ್ಯರನ್ನು ಲೋಕಸಭೆಗೆ ಕಳಿಸಿದ್ದರು. ಅವರು ಇಲ್ಲಿಯ ವರೆಗೆ ಲೋಕಸಭೆಯಲ್ಲಿ ತುಟಿ ಬಿಚ್ಚಿಲ್ಲ.

ವಿಧಾನಮಂಡಲದಲ್ಲಿ ಬರಗಾಲದ ಚರ್ಚೆ ನಡೆದರೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಮಾಡುತ್ತಿರುವ ಈ ಅನ್ಯಾಯದ ವಿವರಗಳೆಲ್ಲವೂ ಹೊರ ಬಂದು ರಾಜ್ಯದ ಜನರ ಎದುರು ತಲೆತಗ್ಗಿಸುವಂತಾಗುತ್ತದೆ ಎನ್ನುವ ಕಾರಣಕ್ಕಾಗಿಯೇ ಪಿಳ್ಳೆ ನೆಪಗಳನ್ನು ಮುಂದಿಟ್ಟು ರಾಜ್ಯದ ಬಿಜೆಪಿ ಶಾಸಕರು ಧರಣಿ ನಡೆಸಿ ಕಲಾಪ ನಡೆಯದಂತೆ ತಡೆಯೊಡ್ಡುವ ಪ್ರಯತ್ನ ಮಾಡುತ್ತಿದ್ದಾರೆ. ರಾಜ್ಯದ ಪ್ರಜ್ಞಾವಂತ ಜನತೆ ಇದನ್ನೆಲ್ಲ ಗಮನಿಸುತ್ತಿದ್ದಾರೆ. ವಿಪಕ್ಷದ ನಾಯಕರಾಗಿ ಆಯ್ಕೆಯಾಗಿರುವ ಆರ್ ಅಶೋಕ್ ಅವರಿಗೆ ಅವರ ಪಕ್ಷದ ಬಹುಸಂಖ್ಯಾತ ಶಾಸಕರ ಬೆಂಬಲವೇ ಇಲ್ಲ. ಪ್ರತಿದಿನ ಅವರದ್ದೇ ಪಕ್ಷದ ಶಾಸಕರು ಒಬ್ಬೊಬ್ಬರಾಗಿ ಅಶೋಕ್ ಅವರ ಮುಖಕ್ಕೆ ಮಂಗಳಾರತಿ ಎತ್ತುತ್ತಿದ್ದಾರೆ. ಯಾವ ಕುರ್ಚಿಯೂ ಸಿಕ್ಕಿಲ್ಲ ಎಂಬ ವೇದನೆಯಿಂದ ಕುದಿಯುತ್ತಿರುವ ಬಸವನಗೌಡ ಪಾಟೀಲ್ ಯತ್ನಾಳ್ ಅವರಂತಹವರು ಬಹಿರಂಗವಾಗಿ ಯಡಿಯೂರಪ್ಪನವರಿಂದ ಹಿಡಿದು ಅಶೋಕ್ ವರೆಗೆ ಎಲ್ಲರ ವಿರುದ್ಧ ಹರಿಹಾಯುತ್ತಿದ್ದಾರೆ. ಇದನ್ನೆಲ್ಲ ಗಮನಿಸುತ್ತಿರುವ ರಾಜ್ಯದ ಜನತೆ ಬಿಜೆಪಿ ಶಾಸಕರಿಗೆ ಬೀದಿ ಬೀದಿಯಲ್ಲಿ ಛೀಮಾರಿ ಹಾಕುತ್ತಿದ್ದಾರೆ. ಇದರಿಂದ ಮುಖ ಎತ್ತಿಕೊಂಡು ಹೋಗಲಾಗದ ಬಿಜೆಪಿ ಶಾಸಕರು ರಾಜ್ಯದ ಜನರ ಗಮನ ಬೇರೆ ಕಡೆ ಸೆಳೆಯುವ ಉದ್ದೇಶದಿಂದ ಕಲಾಪಕ್ಕೆ ಅಡ್ಡಿ ಉಂಟು ಮಾಡುತ್ತಿದ್ದಾರೆ.

ಮಾತೆತ್ತಿದರೆ ದಮ್ಮು ತಾಖತ್ ಬಗ್ಗೆ ಮಾತನಾಡುವ ಬಿಜೆಪಿ ನಾಯಕರು ವಿಧಾನ ಮಂಡಲದ ಕಲಾಪದಲ್ಲಿ ಭಾಗವಹಿಸುವ ಧೈರ ತೋರಬೇಕು. ವಿಧಾನಸಭಾ ಅಧಿವೇಶನವನ್ನು ಕರೆದಿರುವುದೇ ರಾಜ್ಯ ಸರ್ಕಾರದ ಆಡಳಿತದ ವಿಮರ್ಶೆಗೆ. ಸರ್ಕಾರ ತನ್ನ ಕರ್ತವ್ಯದಲ್ಲಿ ಎಡವಿದ್ದರೆ, ತಪ್ಪುಗಳನ್ನು ಮಾಡಿದ್ದರೆ ಅದನ್ನು ಎತ್ತಿ ತೋರಿಸುವ ಕೆಲಸವನ್ನು ವಿರೋಧ ಪಕ್ಷಗಳು ಮಾಡಬೇಕಾಗಿದೆ. ಆ ದಮ್ಮು ತಾಖತ್ ಬಿಜೆಪಿ ಶಾಸಕರಿಗೆ ಇಲ್ಲ. ಸಾಮಾನ್ಯವಾಗಿ ಆಡಳಿತ ಪಕ್ಷಗಳು ವಿರೋಧ ಪಕ್ಷಗಳನ್ನು ಎದುರು ಹಾಕಿಕೊಳ್ಳಲು ಹಿಂದೇಟು ಹಾಕುತ್ತದೆ. ನಮ್ಮ ರಾಜ್ಯದಲ್ಲಿ ವಿರೋಧಪಕ್ಷಗಳಿಗೆ ಆಡಳಿತ ಪಕ್ಷವನ್ನು ಎದುರಿಸುವ ಧೈರ್ಯವೇ ಇಲ್ಲ. ಮೋದಿಯವರಂತೆ ನಾವೇನು ವಿರೋಧಪಕ್ಷವನ್ನೇ ನಿರ್ನಾಮ ಮಾಡುವ ಬಗ್ಗೆ ಮಾತನಾಡುವುದಿಲ್ಲ. ಒಂದು ಸಮರ್ಥ ವಿರೋಧ ಪಕ್ಷ ಇರಬೇಕು ಎಂದು ಬಯಸುವವರು ನಾವು. ಈ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕರು ಅನಗತ್ಯ ಧರಣಿ ಕೈಬಿಟ್ಟು ಕಲಾಪದಲ್ಲಿ ಭಾಗವಹಿಸಬೇಕೆಂದು ಮನವಿ ಮಾಡುತ್ತೇನೆ.

## ಗ್ರಾಮೀಣಭಾಗದ ಮಕ್ಕಳು ತಮ್ಮಪ್ರತಿಭೆ ಹೊರಹಾಕಲು ಸಹಪಠ್ಯ ಚಟುವಟಿಕೆಗಳು ಅತ್ಯಗತ್ಯ: ನಾ.ತಿಪ್ಪೇಸ್ವಾಮಿ

» **ಹಿರಿಯೂರು**



ಶಾಲೆಯಲ್ಲಿ ಪಠ್ಯ ಚಟುವಟಿಕೆಗಳ ಜೊತೆಗೆ ಸಹಪಠ್ಯ ಚಟುವಟಿಕೆಗಳನ್ನು ಅಳವಡಿಸುವ ಮೂಲಕ ಗ್ರಾಮೀಣ ಭಾಗದ ಮಕ್ಕಳು ತಮ್ಮ ಪ್ರತಿಭೆಯನ್ನು ಹೊರಹಾಕಲು ಸಹಪಠ್ಯ ಚಟುವಟಿಕೆಗಳು ಅತ್ಯಗತ್ಯವಾಗಿದ್ದು, ಈ ಕುರಿತು ಶಿಕ್ಷಕರು ಅಗತ್ಯಕ್ರಮ ಕೈಗೊಳ್ಳಬೇಕು ಎಂಬುದಾಗಿ ಕೆ.ಪಿ.ಎಸ್.ಸಿ ವಿದ್ಯಾಸಂಸ್ಥೆ ಮಹಾಪೋಷಕ ನಾ.ತಿಪ್ಪೇಸ್ವಾಮಿ ಹೇಳಿದರು.

ತಾಲ್ಲೂಕಿನ ಹೊಸಯಳನಾಡು ಕೆ.ಪಿ.ಎಸ್.ಸಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪದವಿ ಪೂರ್ವ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತಾಲ್ಲೂಕು ಮಟ್ಟದ ಚರ್ಚಾ ಸ್ಪರ್ಧೆ ಮತ್ತು ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಹೋಬಳಿ ಮಟ್ಟದ ಪ್ರಬಂಧ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಮಕ್ಕಳು ಇಂತಹ ಸ್ಪರ್ಧೆಯಲ್ಲಿ ಭಾಗವಹಿಸುವುದರಿಂದ ಭಾಷೆಯ ಹಿಡಿತ, ವಿಷಯ ಮಂಡನೆ, ಪಾಲ್ಗೊಳ್ಳುವಿಕೆ, ಸಂವಹನ ಕೌಶಲ್ಯ, ವಿಚಾರ ಸ್ಪಷ್ಟತೆ ಮುಂತಾದ ಗುಣಗಳನ್ನು ಬೆಳೆಸಿಕೊಳ್ಳುವ ಜೊತೆಗೆ ಕ್ರೀಯಾಶೀಲತೆಯನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂಬುದಾಗಿ ಹೇಳಿದರು.

ಈ ಸ್ಪರ್ಧೆಯಲ್ಲಿ ಪ್ರಾಥಮಿಕ ಶಾಲಾ ಮಕ್ಕಳ ಪ್ರಬಂಧ ಸ್ಪರ್ಧೆಯಲ್ಲಿ ಹೊಸಯಳನಾಡು ಕೆಪಿಎಸ್ ಶಾಲೆಯ ನಿತಿನ್ (ಪ್ರಥಮ), ಮಸ್ಕಲ್ ಎಚ್ ಪಿಎಸ್ ಶಾಲೆ ಸೃಷ್ಟಿ ( ದ್ವಿತೀಯ), ಆಲೂರು ಎಚ್ ಪಿ ಎಸ್ ಶಾಲೆಯ ಎಚ್. ಭರತ್ (ತೃತೀಯ), ಪ್ರೌಢಶಾಲಾ ವಿಭಾಗದ ಚರ್ಚಾ ಸ್ಪರ್ಧೆಯಲ್ಲಿ ಆಂಬಲಗೆರೆ ಶಾಲೆಯ ನಿತ್ಯಾಶ್ರೀ (ಪ್ರಥಮ),

ಹೊಸಯಳನಾಡು ಕೆಪಿಎಸ್ ಶಾಲೆಯ ಬೆನಜರ್( ದ್ವಿತೀಯ), ಆಂಬಲಗೆರೆ ಜಿಎ□□□ಸ್ ಶಾಲೆಯ ಮಂಜುಶ್ರೀ (ತೃತೀಯ), ಪಿಯುಸಿ ವಿಭಾಗದ ಚರ್ಚಾ ಸ್ಪರ್ಧೆಯಲ್ಲಿ ಹೊಸಯಳನಾಡು ಪಿಯು ಕಾಲೇಜಿನ ಸಿದ್ಧಾರ್ಥ ( ಪ್ರಥಮ), ಸರಕಾರಿ ಬಾಲಕಿಯ ಕಾಲೇಜಿನ ಎಚ್ .ಅರ್. ಸಾಹಿತ್ಯ (ದ್ವಿತೀಯ), ಎಸ್ ಆರ್ ಪಿಯು ಕಾಲೇಜಿನ ಐಶ್ವರ್ಯ (ತೃತೀಯ) ಬಹುಮಾನ ಪಡೆದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರಾದ ತಿಮ್ಮಶೆಟ್ಟ್ರ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಎಚ್.ತಿಪ್ಪೇಸ್ವಾಮಿ, ಉಪಪ್ರಾಂಶುಪಾಲ ನಾಗರಾಜಾಚಾರ್, ನಿವೃತ್ತ ಪ್ರಾಚಾರ್ಯ ಕೆಂಚಪ್ಪ, ಉಪನ್ಯಾಸಕರಾದ ಕೆ.ಎಂ.ಜಗನ್ನಾಥ್, ಡಿ.ಚಿತ್ತಣ್ಣ, ಹನುಮಂತಪ್ಪ, ರುದ್ರಮುನಿ, ರಂಗಸ್ವಾಮಿ, ಗಿರೀಶ್ ಇತರರು ಉಪಸ್ಥಿತರಿದ್ದರು.

## 2024ರ ಲೋಕಸಭಾ ಚುನಾವಣೆಗೆ ಸಿದ್ದತೆ ಆರಂಭ, ವಲ್ನೆರಬಲ್, ಕ್ರಿಟಿಕಲ್ ಮತಗಟ್ಟೆಗಳ ಸಮೀಕ್ಷೆ



» **ದಾವಣಗೆರೆ**

2024 ರ ಲೋಕಸಭಾ ಚುನಾವಣೆಗೆ ಸಿದ್ದತೆ ನಡೆಯುತ್ತಿದ್ದು ಜಿಲ್ಲೆಯಲ್ಲಿ ಮುಕ್ತ ಹಾಗೂ ಶಾಂತಯುತ ಚುನಾವಣೆ ನಡೆಸಲು ವಲ್ನೆರಬಲ್, ಕ್ರಿಟಿಕಲ್ ಮತಗಟ್ಟೆಗಳ ಸಮೀಕ್ಷೆ ಕೈಗೊಂಡು ಸುವ್ಯವಸ್ಥಿತವಾದ ಚುನಾವಣೆ ನಡೆಸಲು ಅಧಿಕಾರಿಗಳು ಸಿದ್ದರಾಗಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಮುಕ್ತ, ಶಾಂತಯುತ ಚುನಾವಣೆ ನಡೆಸಲು ಕೈಗೊಳ್ಳಬೇಕಾದ ಸಿದ್ದತೆಗಳ ಬಗ್ಗೆ ಕೈಗೊಂಡ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ದಾವಣಗೆರೆ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳು ಮತ್ತು ವಿಜಯನಗರ ಜಿಲ್ಲೆಯ ಹರಪನಹಳ್ಳಿ ವಿಧಾನಸಭಾ ಕ್ಷೇತ್ರ ಸೇರಲಿದೆ. ಈ ಹಿಂದೆ ನಡೆದ ಚುನಾವಣಾ ಸಂದರ್ಭದಲ್ಲಿ ನಡೆದ ಗುಂಪು ಘರ್ಷಣೆ ಮತ್ತು ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಗಳನ್ನು ಆಧರಿಸಿ ಸಾರ್ವಜನಿಕರು ಮುಕ್ತವಾಗಿ ಮತದಾನ ಮಾಡಲು ಬೇಕಾದ ವಾತಾವರಣ ಕಲ್ಪಿಸಲು ದುರ್ಬಲ ಪ್ರದೇಶಗಳನ್ನು ಗುರುತಿಸಿ ಇದರ ವ್ಯಾಪ್ತಿಯಲ್ಲಿ ಬರುವ ಮತಗಟ್ಟೆಗಳನ್ನು ಕ್ರಿಟಿಕಲ್ ಮತಗಟ್ಟೆಗಳೆಂದು ಗುರುತಿಸಿ ಇಲ್ಲಿ ಶಾಂತಯುತವಾದ ಮತದಾನಕ್ಕೆ ಅಗತ್ಯವಿರುವ ಎಲ್ಲಾ ಕ್ರಮ ಕೈಗೊಳ್ಳಲಾಗುತ್ತದೆ. ಈ ಬಗ್ಗೆ ಅಧಿಕಾರಿಗಳು ಕೂಲಂಕುಷವಾಗಿ ಪರಿಶೀಲಿಸಿ ವರದಿ ನೀಡಲು ಎಲ್ಲಾ ತಹಶೀಲ್ದಾರರಿಗೆ ಸೂಚನೆ ನೀಡಿದರು. ಎಲ್ಲಾ ತಹಶೀಲ್ದಾರರು ಪ್ರತಿ ಮತಗಟ್ಟೆಗಳನ್ನು ಪರಿಶೀಲನೆ ನಡೆಸಿ ಮುಕ್ತ, ನ್ಯಾಯ ಸಮ್ಮತ, ಶಾಂತಯುತ ಚುನಾವಣೆ ನಡೆಸಲು ಬೇಕಾದ ಎಲ್ಲಾ ಸಿದ್ದತೆಗಳ ಕುರಿತಂತೆ ತಕ್ಷಣವೇ ವರದಿ ನೀಡಲು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಉಪಸ್ಥಿತರಿದ್ದರು.

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿ


» **ಹೊಸದುರ್ಗ**

ತಾಲ್ಲೂಕಿನಲ್ಲಿ 2023–24ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿರುತ್ತದೆ ಎಂದು ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್.ಈಶ ತಿಳಿಸಿದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕಸಬಾ, ಮಾಡದಕೆರೆ ಹಾಗೂ ಶ್ರೀರಾಂಪುರ ಹೋಬಳಿಯ ಕಡಲೆ (ಮಳೆಯಾಶ್ರಿತ) ಬೆಳಗೆ ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ಆಸಕ್ತ ರೈತರು ಕಡಲೆ (ಮಳೆಯಾಶ್ರಿತ) ಬೆಳೆ ವಿಮೆಗೆ ನೋಂದಣಿ ಮಾಡಲು ಡಿಸೆಂಬರ್ 15 ರಂದು ಕೊನೆಯ ದಿನಾಂಕವಾಗಿದ್ದು ಬೆಳೆ ವಿಮೆಗೆ ನೊಂದಾಯಿಸುವಂತಹ ರೈತರು ಕಡ್ಡಾಯವಾಗಿ ಪ್ರೂಟ್ಸ್ ಎಫ್.ಐ.ಡಿ. ಹೊಂದಿರತಕ್ಕದ್ದು ಬೆಳೆ ವಿಮೆ ಕಟ್ಟಿದ ನಂತರ ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ , ಭೂಕುಸಿತ ಮತ್ತು ಬೆಳೆ ಮುಳುಗಡೆ, ಮೇಘಸ್ಪೋಟ ಮತ್ತು ಗುಡುಗು ಮಿಂಚುಗಳಿಂದ ಆಗುವ ಬೆಂಕಿಯ ಅವಗಡಗಳನ್ನು ರೈತರು ಘಟನೆ ಸಂಭವಿಸಿದ 72 ಗಂಟೆಯೊಳಗೆ ವಿಮೆ ಕಂಪನಿಗೆ (ಅಗ್ರೀ ಕಲ್ಚರ್ ಇನ್ಸೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್, ಟೋಲ್ ಫ್ರೀ ನಂಬರ್ □ 18004250505 ) ಕರೆ ಮಾಡಿ.

**ಪ್ರಮುಖ ಸುದ್ದಿ**

# ರೋಟರಿ ಸಂಸ್ಥೆ ಜನರ ಆರೋಗ್ಯ ರಕ್ಷಣೆಗೆ ಸದಾಮುಂದು

» **ಹಿರಿಯೂರು**



ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೋಟರಿ, ಇನ್ನರ್ ವ್ಹೀಲ್ ಸಂಸ್ಥೆಗಳು ಸಾಮಾಜಿಕವಾಗಿ ಜನಸಾಮಾನ್ಯರ ಆರೋಗ್ಯ ರಕ್ಷಣೆಗೆ ಸತತವಾಗಿ ಉಚಿತ ಆರೋಗ್ಯ ತಪಾಸಣೆ ಶಿಬಿರಗಳನ್ನು ನಡೆಸುತ್ತಲೇ ಬಂದಿವೆ ಎಂಬುದಾಗಿ ರೆಡ್ ಕ್ರಾಸ್ ಸಂಸ್ಥೆ ಕಾರ್ಯದರ್ಶಿ ಎಂ.ಎಸ್. ರಾಘವೇಂದ್ರ ಹೇಳಿದರು.

ನಗರದ ರೋಟರಿ ಸಭಾಭವನದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೋಟರಿ, ಇನ್ನರ್ ವ್ಹೀಲ್ ಸಂಸ್ಥೆಗಳು, ಹಾಗೂ ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಯ ಸಹಕಾರದಲ್ಲಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಶಿಬಿರಕ್ಕೆ ಉತ್ತಮ ತಜ್ಞವೈದ್ಯರುಗಳು ಆಗಮಿಸಿದ್ದು ಶಿಭಿರಾರ್ಥಿಗಳು ತಮಗೆ ಇರುವಂತಹ ಹೃದಯದ ಸಮಸ್ಯೆ, ಮೂಳೆನೋವು, ನರರೋಗ, ಕ್ಯಾನ್ಸರ್, ಮೂತ್ರಪಿಂಡಕ್ಕೆ ಸಂಬಂಧಿಸಿದಂತಹ ಹಲವಾರು ಸಮಸ್ಯೆಗಳನ್ನು ಶಿಬಿರಕ್ಕೆ ಬಂದಿರುವ ತಜ್ಞವೈದ್ಯರುಗಳಿಂದ ತಪಾಸಣೆ ಮಾಡಿಸಿಕೊಂಡು, ಸೂಕ್ತಸಲಹೆ ಚಿಕಿತ್ಸೆಪಡೆದು, ನಿಮ್ಮ ಆರೋಗ್ಯ ರಕ್ಷಣೆ ಮಾಡಿಕೊಳ್ಳಬೇಕು ಎಂಬುದಾಗಿ ಹೇಳಿದರು.ಸಪ್ತಗಿರಿ ಆಸ್ಪತ್ರೆಯ ವೈದ್ಯ ಡಾ.ಅಭಿಲಾಷ್ ಮಾತನಾಡಿ, ಕಾರ್ಡಿಯಾಲಜಿ ವೈಧ್ಯೆ ಡಾ.ಐಶ್ವರ್ಯ ಮತ್ತು ಸುಗಂಧ, ಸರ್ಜಿಕಲ್ ಡಾ.ವರ್ಷಿತಾ, ಆರ್ಥೋಪೆಡಿಕ್ ಲೇಖಶ್ರೀ ಇವರುಗಳು ಆಗಮಿಸಿರುತ್ತಾರೆ ರೋಗಿಗಳು ಯಾವುದೇ ಅಂಜಿಕೆ ಇಲ್ಲದೆ ತಮ್ಮ ಕಾಯಿಲೆಗಳ ಬಗ್ಗೆ ಡಾಕ್ಟರ್ ಗಳಿಗೆ ತಿಳಿಸಿ ತಪಾಸಣೆ ಮೂಲಕ ಸೂಕ್ತ ಸಲಹೆ, ಚಿಕಿತ್ಸೆಗಳನ್ನು ಪಡೆಯಬಹುದು ಎಂಬುದಾಗಿ ಹೇಳಿದರು. ರೋಟರಿ ಅಧ್ಯಕ್ಷರು ಡಿ.ದೇವರಾಜ್ ಮೂರ್ತಿ ಮಾತನಾಡಿ, ರೋಗಿಗಳು ಯಾವುದೇ ಹಣ ಖರ್ಚುಮಾಡದೇ ತಮ್ಮ ಕಾಯಿಲೆಗಳಿಗೆ ನಮ್ಮ ಸಂಸ್ಥೆಗಳು ನಡೆಸುವಂತಹ ಉಚಿತ ತಪಾಸಣಾ ಶಸ್ತ್ರ ಚಿಕಿತ್ಸಾ ಶಿಬಿರಗಳನ್ನು ಅಲಕ್ಷಿಸದೇ ತಮ್ಮಗಳ ಆರೋಗ್ಯ ರಕ್ಷಣೆಗೆ ಮುಂದಾಗಬೇಕು ಎಂಬುದಾಗಿ ಹೇಳಿದರು. ಸಪ್ತಗಿರಿ ಆಸ್ಪತ್ರೆ ಕೋ ಆರ್ಡಿನೇಟರ್ ಫಣೀಂದ್ರ ಮಾತನಾಡಿ, ಈ ಶಿಬಿರದಲ್ಲಿ ಸುಮಾರು 80 ಕ್ಕೂ ಹೆಚ್ಚು ಜನರು ತಪಾಸಣೆ ಮಾಡಿಸಿಕೊಂಡಿದ್ದು, ಸಪ್ತಗಿರಿ ಆಸ್ಪತ್ರೆಯಲ್ಲಿ ಸುಮಾರು 10 ಜನರಿಗೆ ಉಚಿತ ಹೃದಯ ಶಸ್ತ್ರಚಿಕಿತ್ಸೆಗೆನಡೆಸಲಾಗುವುದು ಎಂಬುದಾಗಿ ಹೇಳಿದರು. ಈ ಕಾರ್ಯಕ್ರಮದಲ್ಲಿ ಇನ್ನರ್ ವ್ಹೀಲ್ ಅಧ್ಯಕ್ಷೆ ಲಕ್ಷ್ಮೀರಾಜೇಶ್ ಸೌಮ್ಯಾ ಪ್ರಶಾಂತ್, ಎಲ್.ಆನಂದಶೆಟ್ಟಿ, ರೆಡ್ ಕ್ರಾಸ್ ಸಂಸ್ಥೆಯ ಖಜಾಂಚ್ ಸಣ್ಣಭಿಮಣ್ಣ, ಬಿ.ಕೆ.ನಾಗಣ್ಣ ಶ್ರೀಮತಿ ಶಶಿಕಲಾ ರವಿಶಂಕರ್, ಮಹಾಬಲೇಶ್ವರಶೆಟ್ಟಿ, ಪಿ.ಆರ್.ಸತೀಶ್ ಬಾಬು, ಇಸ್ಮಾಯಿಲ್ ಜಬೀವುಲ್ಲಾ, ರೋಟರಿಯ ವಸಂತ್ ಕುಮಾರ್, ಆರ್.ಶಿವಕುಮಾರ್, ವೆಂಕಟೇಶ್, ಸಪ್ತಗಿರಿ ಆಸ್ಪತ್ರೆ ತಜ್ಞ ವೈದ್ಯರಾದ ಡಾ.ಅಭಿಷೇಕ್, ಡಾ,ಐಶ್ವರ್ಯ, ಡಾ, ಸುಗಂಧ, ಡಾ.ವರ್ಷಿತಾ, ಡಾ.ಲೇಖಶ್ರೀ ಮತ್ತು ಸಿಬ್ಬಂದಿವರ್ಗದವರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T